ಕನ್ನಡ ದಿನಪತ್ರಿಕೆ
19 ಎಪ್ರಿಲ್ । ಶುಕ್ರವಾರ
19 APRIL 2024

ಬೆಳಗಾವಿ ವರದಿ

ಪ್ರಧಾನ ಸಂಪಾದಕ : ಸತೀಶ ಬ ಗುಡಗೆನಟ್ಟಿ

BELAGAVI VARADI KANNADA DAILY NEWS PAPER

ಗಡಿ ಜಿಲ್ಲೆಯ ಧ್ವನಿ...

₹4 | ಸಂಪುಟ – 5 ಸಂಚಿಕೆ – 53 ಪುಟ – 4 | RNI . KARKAN/2020/79084 | ADVRT EMAIL. BELAGAVIVARADIEDITOR@GMAIL.COM | NEWSBELAGAVI@GMAIL.COM | 9900332089 | REG.NO G-2/PMG/KA/NK/BM/139/2024-26

ಸ್ವತಂತ್ರ ಅಭ್ಯರ್ಥಿಯಾಗಿ ದಿಂಗಾಲೇಶ್ವರ ಶ್ರೀ ನಾಮಪತ್ರ ಸಲ್ಲಿಕೆ

ಧಾರವಾಡ: ಕೇಂದ್ರ ಸಚಿವ ಪ್ರಹ್ಲಾದ್ ಜೋಶಿ ವಿರುದ್ಧ ಸಿಡಿದೆದ್ದಿರುವಂತ ದಿಂಗಾಲೇಶ್ವರ ಶ್ರೀಗಳು, ಗುರುವಾರ ಅಧಿಕೃತವಾಗಿ ಸ್ವತಂತ್ರ ಅಭ್ಯರ್ಥಿಯಾಗಿ ನಾಮಪತ್ರವನ್ನು ಸಲ್ಲಿಸಿದ್ದಾರೆ.

ಮೆರವಣಿಗೆ ಇಲ್ಲದೇ ಸಾಂಕೇತಿಕವಾಗಿ ಧಾರವಾಡದ ಜಿಲ್ಲಾಧಿಕಾರಿ ಕಚೇರಿಗೆ ತೆರಳಿದಂತ ದಿಂಗಾಲೇಶ್ವರ ಶ್ರೀಗಳು, ಧಾರವಾಡ ಲೋಕಸಭಾ ಕ್ಷೇತ್ರದ ಪಕ್ಷೇತರ ಅಭ್ಯರ್ಥಿಯಾಗಿ ಲೋಕಸಭಾ ಚುನಾವಣೆಗೆ ತಮ್ಮ ಉಮೇದುವಾರಿಕೆಯನ್ನು ಸಲ್ಲಿಸಿದರು.

ಕೇವಲ ನಾಲ್ವರು ಬೆಂಬಲಿಗರೊಂದಿಗೆ ಆಗಮಿಸಿ, ಧಾರವಾಡದ ಡಿಸಿ ಕಚೇರಿಯಲ್ಲಿ ಚುನಾವಣಾಧಿಕಾರಿಗಳಿಗೆ ದಿಂಗಾಲೇಶ್ವರ ಶ್ರೀಗಳು ತಮ್ಮ ನಾಮಪತ್ರವನ್ನು ಸಲ್ಲಿಸಿದರು. ಈ ಬಳಿಕ ಮೆರವಣಿಗೆ ಸ್ಥಳಕ್ಕೆ ತೆರಳಿದಂತ ಅವರು, ಧಾರವಾಡದ ಕಾರ್ಪೋರೇಷನ್ ವೃತ್ತದಿಂದ ದಿಂಗಾಲೇಶ್ವರ ಶ್ರೀಗಳು ಮೆರವಣಿಗೆಯಲ್ಲಿ ಆಗಮಿಸಿದರು. ಮೆರವಣಿಗೆ ಮೂಲಕ ಮತ್ತೆ ಡಿಸಿ ಕಚೇರಿಗೆ ಆಗಮಿಸಿ ನಾಮಪತ್ರವನ್ನು ಸಲ್ಲಿಕೆ ಮಾಡಿದರು.

15 ನಿಮಿಷ ನಡೆದು, ಆನಂತ್ರ ಮೆರವಣಿಗೆಯಲ್ಲಿ ಸಾಗಿ ಬಂದ ಅವರೊಂದಿಗೆ 200ಕ್ಕೂ ಹೆಚ್ಚು ಬೆಂಬಲಿಗರು ಇದ್ದರು. ಈ ಮೂಲಕ ಧಾರವಾಡ ಲೋಕಸಭಾ ಕ್ಷೇತ್ರದ ಪಕ್ಷೇತರ ಅಭ್ಯರ್ಥಿಯಾಗಿ ದಿಂಗಾಲೇಶ್ವರಶ್ರೀಗಳು ನಾಮಪತ್ರವನ್ನು ಸಲ್ಲಿಸಿದರು.

ಅತ್ಯಂತ ಸರಳ ರೀತಿಯಲ್ಲಿ ನಾಮಪತ್ರ ಸಲ್ಲಿಸಿದ ಪ್ರಿಯಂಕಾ ಜಾರಕಿಹೊಳಿ

ಬೆಳಗಾವಿ: ಚಿಕ್ಕೋಡಿ ಲೋಕಸಭಾ ಕ್ಷೇತ್ರದ ಕಾಂಗ್ರೆಸ್ ಅಭ್ಯರ್ಥಿ ಪ್ರಿಯಂಕಾ ಜಾರಕಿಹೊಳಿಯವರು ಗುರುವಾರ ಚಿಕ್ಕೋಡಿಯ ಎಸಿ ಕಚೇರಿಯಲ್ಲಿ ಚುನಾವಣಾಧಿಕಾರಿಗಳಾದ ರಾಹುಲ್ ಶಿಂಧೆ ಅವರಿಗೆ ಅತ್ಯಂತ ಸರಳವಾಗಿ ನಾಮಪತ್ರ ಸಲ್ಲಿಸಿದರು.

ತಂದೆ, ಸಚಿವರಾದ ಸತೀಶ್ ಜಾರಕಿಹೊಳಿಯವರ ಹಾದಿಯಲ್ಲಿ ಸಾಗುತ್ತಿರುವ ಪ್ರಿಯಂಕಾ ಜಾರಕಿಹೊಳಿ ಅವರು ಅವರು ಯಾವುದೇ ಮೆರವಣಿಗೆ , ಆಡಂಬರ ಇಲ್ಲದೇ ಸರಳವಾಗಿಯೇ ನಾಮಪತ್ರ ಸಲ್ಲಿಸಿ ಸರಳತೆ ಮೆರೆದರು. ಕಿತ್ತೂರು ಕರ್ನಾಟಕ ಭಾಗದಲ್ಲಿ ಅತ್ಯಂತ ಸರಳತೆಯಿಂದ ನಾಮಪತ್ರ ಸಲ್ಲಿಸಿದ ಮೊದಲ ಅಭ್ಯರ್ಥಿ ಎಂಬ ಹೆಗ್ಗಳಿಕೆ ಪಡೆದ ಪ್ರಿಯಂಕಾ ಜಾರಕಿಹೊಳಿ ತನ್ನ ತಂದೆ ಸಚಿವರಾದ ಸತೀಶ್ ಜಾರಕಿಹೊಳಿಯವರ ಹಾದಿಯನ್ನೇ ಅನುಸರಿಸುವ ಜೊತೆಗೆ ತಂದೆ ಹಾಕಿಕೊಟ್ಟ ಮಾರ್ಗದಲ್ಲಿ ಯಾವುದೇ ಮೆರವಣಿಗೆ ಅಥವಾ ಆಡಂಬರಕ್ಕೆ ಅವಕಾಶ ಕೊಡದೇ ನ್ಯಾಯಸಮ್ಮತದ ಸರಳತೆಗೆ ಸಾಕ್ಷಿಯಾಗಿ ತನ್ನ ನಾಮಪತ್ರ ಸಲ್ಲಿಸುವ ಮೂಲಕ ಎಲ್ಲರ ಗಮನ ಸೆಳೆದರು.

ನಾಮಪತ್ರ ಸಲ್ಲಿಸುವಾಗ ಪ್ರಿಯಂಕಾಗೆ ಲೋಕೋಪಯೋಗಿ ಇಲಾಖೆ ಸಚಿವ ಸತೀಶ್ ಜಾರಕಿಹೊಳಿ, ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆ ಸಚಿವೆ ಲಕ್ಷ್ಮೀ ಹೆಬ್ಬಾಳಕರ್, ವಿಧಾನ ಪರಿಷತ್ ಸದಸ್ಯ, ದೆಹಲಿಯ ವಿಶೇಷ ಪ್ರತಿನಿಧಿ ಪ್ರಕಾಶ ಹುಕ್ಕೇರಿ, ಶಾಸಕರಾದ ಲಕ್ಷ್ಮಣ್ ಸವದಿ, ಗಣೇಶ್ ಹುಕ್ಕೇರಿ, ರಾಜು ಕಾಗೆ, ಮಹೇಂದ್ರ ತಮ್ಮಣ್ಣವರ್, ವಿಶ್ವಾಸ ವೈದ್ಯ, ಆಸೀಫ್ (ರಾಜು) ಸೇಠ್, ಮಹಾಂತೇಶ ಕೌಜಲಗಿ, ಬಾಬಾ ಸಾಹೇವ್ ಪಾಟೀಲ್, ಯುವ ನಾಯಕ ರಾಹುಲ್ ಜಾರಕಿಹೊಳಿ ಸಾಥ್ ನೀಡಿದರು.

ಅಲ್ಲದೇ ನಾಮಪತ್ರ ಸಲ್ಲಿಕೆ ಪ್ರಕ್ರಿಯೆ ಮುಗಿಯುವ ತನಕ ಮಾಜಿ ಸಚಿವರಾದ ವೀರಕುಮಾರ ಪಾಟೀಲ್, ಎ.ಬಿ.ಪಾಟೀಲ್, ಮಾಜಿ ಶಾಸಕರಾದ ಕಾಕಾ ಸಾಹೇಬ್ ಪಾಟೀಲ್, ಶ್ಯಾಮ್ ಘಾಟಗೆ, ಬೆಳಗಾವಿ ಜಿಲ್ಲಾ ಗ್ರಾಮೀಣ ಕಾಂಗ್ರೆಸ್ ಅಧ್ಯಕ್ಷ ವಿನಯ ನಾವಲಗಟ್ಟಿ, ಉತ್ತಮ ಪಾಟೀಲ್, ಚಿಕ್ಕೋಡಿ ಜಿಲ್ಲಾ ಕಾಂಗ್ರೆಸ್ ಅಧ್ಯಕ್ಷ ಲಕ್ಷ್ಮಣರಾವ್ ಚಿಂಗಳೆ, ಕೆಪಿಸಿಸಿ ಪ್ರಧಾನ ಕಾರ್ಯದರ್ಶಿ ಮಹಾವೀರ ಮೋಹಿತೆ, ಉತ್ತಮ ಪಾಟೀಲ್ ಸೇರಿದಂತೆ ನೂರಾರು ಮುಖಂಡರು ಚಿಕ್ಕೋಡಿ ಎಸಿ ಕಚೇರಿ ಆವರಣದ ಹೊರಗೆ ನಿಂತಿದ್ದರು.

ನಾಮಪತ್ರ ಸಲ್ಲಿಸಿದ ಬಳಿಕ ಮಾಧ್ಯಮದವರೊಂದಿಗೆ ಮಾತನಾಡಿದ ಸಚಿವ ಸತೀಶ್ ಜಾರಕಿಹೊಳಿ, ಚಿಕ್ಕೋಡಿ ಲೋಕಸಭೆ ಕ್ಷೇತ್ರದಲ್ಲಿ ಕಾಂಗ್ರೆಸ್ ಅಭ್ಯರ್ಥಿ ಪ್ರಿಯಂಕಾ ಜಾರಕಿಹೊಳಿ ಪರ ಸಮೀಕ್ಷೆಗಳು ಇವೆ. ಆದರೆ ಇಷ್ಟೇ ಅಂತರದಿಂದ ಗೆಲ್ಲುತ್ತಾರೆಂದು ಈಗಲೇ ಹೇಳಲು ಆಗುವುದಿಲ್ಲ. ಇಂದು ಪ್ರಿಯಂಕಾ ಜಾರಕಿಹೊಳಿ ಅವರು ಸಚಿವರು, ಶಾಸಕರು, ಎಂಎಲ್ ಸಿಗಳು, ಮಾಜಿ ಶಾಸಕರ ಸಮ್ಮುಖದಲ್ಲಿ ನಾಮಪತ್ರ ಸಲ್ಲಿಸಿದ್ದು, ಅವರೆಲ್ಲರಿಗೂ ಧನ್ಯವಾದ ತಿಳಿಸುತ್ತೇನೆಂದರು.

ನಾಮಪತ್ರ ಸಲ್ಲಿಸಿದ ಬಳಿಕ ಎರಡನೇ ಹಂತದ ಚುನಾವಣಾ ಪ್ರಚಾರ ಆರಂಭಿಸುತ್ತೇವೆಂದು ಮೊದಲೇ ಹೇಳಿದ್ದೆ. ಅದೇ ರೀತಿ ಇಂದಿನಿಂದಲೇ ಎರಡನೇ ಹಂತದ ಪ್ರಚಾರ ಆರಂಭಿಸುತ್ತೇವೆಂದು ಹೇಳಿದರು.

ಚಿಕ್ಕೋಡಿ ಲೋಕಸಭಾ ಕ್ಷೇತ್ರದ ಕಾಂಗ್ರೆಸ್ ಅಭ್ಯರ್ಥಿ ಪ್ರಿಯಂಕಾ ಜಾರಕಿಹೊಳಿ ಮಾತನಾಡಿ, ಇಂದು ಬೆಳಗಾವಿ ಜಿಲ್ಲೆಯ ಎಲ್ಲಾ ಸಚಿವರ, ಶಾಸಕರ, ಮಾಜಿ ಶಾಸಕರ ಸಮ್ಮುಖದಲ್ಲಿ ನಾಮಪತ್ರ ಸಲ್ಲಿಸಿದ್ದು ಸಂತಸ ತಂದಿದೆ. ಚಿಕ್ಕೋಡಿ ಕ್ಷೇತ್ರದಲ್ಲಿ ಕಾಂಗ್ರೆಸ್ ಪರ ವಾತಾವರಣ ಇದ್ದು, ಸಾರ್ವಜನಿಕರೆಲ್ಲ–ರಿಂದ ಒಳ್ಳೆಯ ಸ್ಪಂದನೆ ದೊರೆಯುತ್ತಿದೆ ಎಂದರು.

ಮಜ್ಜಿಗೆ ಸೇವಿಸಿದ 45ಕ್ಕೂ ಹೆಚ್ಚು ಜನರು ಅಸ್ವಸ್ಥ, ಆಸ್ಪತ್ರೆಗೆ ದಾಖಲು

ತುಮಕೂರು: ಜಿಲ್ಲೆಯಲ್ಲಿ ನಿನ್ನೆ ರಾಮನವಮಿ ಪ್ರಯುಕ್ತ ಮಾಡಲಾಗಿದ್ದಂತ ಮಜ್ಜಿಗೆ ಸೇವಿಸಿದಂತ 45ಕ್ಕೂ ಹೆಚ್ಚು ಜನರು ಅಸ್ವಸ್ಥಗೊಂಡು, ಆಸ್ಪತ್ರೆಗೆ ದಾಖಲಾಗಿರುವಂತ ಘಟನೆ ನಡೆದಿದೆ.

ತುಮಕೂರು ಜಿಲ್ಲೆಯ ಕುಣಿಗಲ್ ತಾಲೂಕಿನ ಗೊಲ್ಲರಹಟ್ಟಿಯಲ್ಲಿ ರಾಮನವಮಿ ಪ್ರಯುಕ್ತ ಮಜ್ಜಿಗೆ, ಪಾನಕ, ಪಲ್ಲಾರ ಮಾಡಲಾಗಿತ್ತು. ನಿನ್ನೆ ಸಂಜೆ ದೇವಸ್ಥಾನದ ಮುಂದೆ ನೆರೆದಿದ್ದಂತ ಗೊಲ್ಲರಹಟ್ಟಿಯ ಜನತೆಗೆ ಮಜ್ಜಿಗೆಯನ್ನು ವಿತರಿಸಲಾಗಿತ್ತು.

ರಾಮನವಮಿ ಪ್ರಯುಕ್ತ ನೀಡಲಾಗಿದ್ದಂತ ಮಜ್ಜಿಗೆ ಸೇವಿಸಿದಂತ 45ಕ್ಕೂ ಹೆಚ್ಚು ಜನರಲ್ಲಿ ವಾಂತಿ, ಬೇಧಿ ಕಾಣಿಸಿಕೊಂಡಿದೆ. ಕೂಡಲೇ ಅವರನ್ನು ಸಮೀಪದ ಆಸ್ಪತ್ರೆಗೆ ಚಿಕಿತ್ಸೆಗಾಗಿ ದಾಖಲಿಸಲಾಗಿದೆ. ಇದೀಗ ಅನೇಕರು ಚಿಕಿತ್ಸೆಯ ಬಳಿಕ ಗುಣಮುಖರಾಗಿದ್ದು, ಪ್ರಾಣಾಪಾಯದಿಂದ ಪಾರಾಗಿರೋದಾಗಿ ತಿಳಿದು ಬಂದಿದೆ.

ಹತಾಶ ಸ್ಥಿತಿಯಲ್ಲಿ ಕಾಂಗ್ರೆಸ್: ಕಾಗೇರಿ

ಭಟ್ಕಳ: 'ದೇಶ ಮತ್ತು ರಾಜ್ಯದಲ್ಲಿ ಕಾಂಗ್ರೆಸ್ ಹತಾಶ ಸ್ಥಿತಿಯಲ್ಲಿದೆ. ಲೋಕಸಭಾ ಚುನಾವಣೆಯಲ್ಲಿ ಕಾಂಗ್ರೆಸ್ಸಿಗೆ ಸ್ಪರ್ಧಿಸಲು ಸಮಥ–ರ್ ಅಭ್ಯರ್ಥಿಗಳೇ ಸಿಗುತ್ತಿಲ್ಲ. ಇನ್ನು ಆ ಪಕ್ಷ ಕೇಂದ್ರದಲ್ಲಿ ಅಧಿಕಾರಕ್ಕೆ ಬರುವುದಾದರೂ ಹೇಗೆ?' ಎಂದು ಬಿಜೆಪಿ ಅಭ್ಯರ್ಥಿ ವಿಶ್ವೇಶ್ವರ ಹೆಗಡೆ ಕಾಗೇರಿ ಲೇವಡಿ ಮಾಡಿದರು.

ಗುರುವಾರ ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದ ಅವರು, 'ದೇಶದಲ್ಲಿ ಕಾಂಗ್ರೆಸ್ ಅಂತೂ ಇಂತೂ 250 ಅಭ್ಯರ್ಥಿಗಳನ್ನು ಕಣಕ್ಕಿಳಿಸಲಿದೆ. ಇದರಲ್ಲಿ 50 ಸ್ಥಾನ ಗೆಲ್ಲುವುದೂ ಕಷ್ಟವಿದೆ. ಆದರೂ ತಾನು ಅಧಿಕಾರಕ್ಕೆ ಬರುತ್ತೇನೆ ಎಂದು ಹೇಳುತ್ತಿರುವುದು ಹಾಸ್ಯಾಸ್ಪದ. ಸೋನಿಯಾ, ರಾಹುಲ್ ಗಾಂಧಿ ನಾಯಕತ್ವವನ್ನು ಯಾರೂ ಒಪ್ಪುತ್ತಿಲ್ಲ. ಕಾಂಗ್ರೆಸ್ಸಿನ ಪ್ರಣಾಳಿಕೆಗೆ ನೈತಿಕತೆ ಇಲ್ಲವಾಗಿದೆ. ರಾಜ್ಯದಲ್ಲಿ ಘೋಷಣೆ ಮಾಡಿದ ಗ್ಯಾರಂಟಿ ಯೋಜನೆಗಳು ಹಳ್ಳ ಹಿಡಿದಿದ್ದು, ಯೋಜನೆ ಸಮರ್ಪಕವಾಗಿ ಜನ–ರಿಗೆ ತಲುಪಿಲ್ಲ. ಕಾಂಗ್ರೆಸ್ ಪಕ್ಷ ಅಗ್ಗದ ಪ್ರಚಾರ ಮತ್ತು ಸಮಾಜ ಒಡೆಯುವ ಕೆಲಸ ಮಾಡುತ್ತಿದೆ. ಸದ್ಯ ಕಾಂಗ್ರೆಸ್ಸಿಗೆ ಗ್ಯಾರಂಟಿ ಬಿಟ್ಟರೆ ಬೇರೆ ಏನೂ ಇಲ್ಲ' ಎಂದು ಲೇವಡಿ ಮಾಡಿದರು.

'ಮನಮೋಹನ ಸಿಂಗ್ ನೇತೃತ್ವದ ಯುಪಿಎ ಸರ್ಕಾರದ ಹಗರಣಗಳು ಕಾಂಗ್ರೆಸ್ಸನ್ನು ಮುಗಿಸಿ ಹಾಕಿವೆ. ರಾಜ್ಯ ಸರ್ಕಾರದಲ್ಲಿ ಅಭಿವೃದ್ಧಿ ಕಾರ್ಯಗಳಿಗೆ ಹಣವಿಲ್ಲ. ಬರಗಾಲ ಇದ್ದರೂ ಸರ್ಕಾರ ಸ್ಪಂದಿಸುತ್ತಿಲ್ಲ. ಸರ್ಕಾರದಲ್ಲಿ ಒಳಜಗಳ, ಭ್ರಷ್ಟಾಚಾರ ಹೆಚ್ಚಿದೆ. ಕಾಂಗ್ರೆಸ್ ಸರ್ಕಾರ ಒಂದು ವರ್ಷದಲ್ಲೇ ಜನರ ವಿಶ್ವಾಸ ಕಳೆದುಕೊಂಡಿದೆ' ಎಂದು ಟೀಕಿಸಿದರು.

'ಕಾಂಗ್ರೆಸ್ಸಿನವರು ಈ ಚುನಾವಣೆಯನ್ನು ಸ್ಥಳೀಯ ಚುನಾವಣೆ ಎಂಬಂತೆ ಬಿಂಬಿಸುತ್ತಿದ್ದಾರೆ. ಲೋಕಸಭೆ ಚುನಾವಣೆಗೆ ಏನು ವಿಷಯ ಇಟ್ಟುಕೊಂಡು ಮಾತನಾಡಬೇಕೋ ಅದನ್ನು ಮಾಡುತ್ತಿಲ್ಲ' ಎಂದರು.

'ಜಿಲ್ಲೆಯಲ್ಲಿ ಅರಣ್ಯ ಭೂಮಿ ಅತಿಕ್ರಮಣ, ಅಂಕೋಲಾ–ಹುಬ್ಬಳ್ಳಿ ರೈಲು, ತಾಳಗುಪ್ಪ–ಹೊನ್ನಾವರ ರೈಲು, ಬಂದರು, ರಾಷ್ಟ್ರೀಯ ಹೆದ್ದಾರಿ ಹೀಗೆ ಹಲವು ಸಮಸ್ಯೆಗಳಿದ್ದು, ಇದನ್ನು ಬಗೆಹ–ರಿಸಲು ಆದ್ಯತೆ ನೀಡುತ್ತೇನೆ' ಎಂದು ಹೇಳಿದರು. ಮಾಜಿ ಸಚಿವ ಶಿವಾನಂದ ನಾಯ್ಕ, ಲೋಕಸಭೆ ಚುನಾವಣೆಯ ಬಿಜೆಪಿ ಜಿಲ್ಲಾ ಸಂಚಾಲಕ ಗೋವಿಂದ ನಾಯ್ಕ, ಮಾಜಿ ಶಾಸಕ ಸುನೀಲ ನಾಯ್ಕ, ಬಿಜೆಪಿ ರಾಜ್ಯ ಘಟಕದ ಹಿಂದುಳಿದ ವರ್ಗಗಳ ಉಪಾಧ್ಯಕ್ಷ ಈಶ್ವರ ನಾಯ್ಕ, ಬಿಜೆಪಿ ಮಂಡಲಾಧ್ಯಕ್ಷ ಲಕ್ಷ್ಮೀನಾರಾಯಣ ನಾಯ್ಕ, ಬಿಜೆಪಿ ಮಹಿಳಾ ಮೋರ್ಚಾ ಜಿಲ್ಲಾ ಘಟಕದ ಅಧ್ಯಕ್ಷೆ ಶಿವಾನಿ ಶಾಂತರಾಮ, ಜಿಲ್ಲಾ ಬಿಜೆಪಿ ಕಾರ್ಯದರ್ಶಿಗಳಾದ ಸುಬ್ರಾಯ ದೇವಡಿಗ, ಶ್ರೀಕಾಂತ ನಾಯ್ಕ, ಮಂಡಲ ಪ್ರಧಾನ ಕಾರ್ಯದರ್ಶಿ ಶ್ರೀನಿವಾಸ ನಾಯ್ಕ, ಖೇದಾರ ಕೊಲ್ಲೆ ಇದ್ದರು.

ದಾಖಲೆ ಇಲ್ಲದ ರೂ73.99 ಲಕ್ಷ ಮೌಲ್ಯದ ಆಭರಣ ವಶ

ಕಾರವಾರ: ಸೂಕ್ತ ದಾಖಲೆ ಇಲ್ಲದೆ ಸಾಗಿಸಲಾಗುತ್ತಿದ್ದ ರೂ73.99 ಲಕ್ಷ ಮೌಲ್ಯದ ಬಂಗಾರ ಮತ್ತು ಬೆಳ್ಳಿ ಆಭರಣಗಳನ್ನು ತಾಲ್ಲೂಕಿನ ಅರ್ಗಾ ಚೆಕ್ಪೋಸ್ಟ್ ನಲ್ಲಿ ಕ್ಷಿಪ್ರ ಪಡೆ ಅಧಿಕಾರಿಗಳು ಬುಧವಾರ ರಾತ್ರಿ ವಶಕ್ಕೆ ಪಡೆದಿದ್ದಾರೆ.

'ಚುನಾವಣೆ ಹಿನ್ನೆಲೆಯಲ್ಲಿ ಎರಡು ದಿನಗಳ ಹಿಂದೆ ತೆರೆಯಲಾಗಿರುವ ಚೆಕ್ಪೋಸ್ಟ್ ನಲ್ಲಿ ತಪಾಸಣೆ ಮಾಡುವಾಗ ಕಾರವಾರದ ಉದ್ಯಮಿಯೊಬ್ಬರ ಕಾರಿನಲ್ಲಿ ಸೂಕ್ತ ದಾಖಲೆ ಇಲ್ಲದೆ ಒಯ್ಯುತ್ತಿದ್ದ ಆಭರಣಗಳು ಪತ್ತೆಯಾದವು.

ರೂ69.98 ಲಕ್ಷ ಮೌಲ್ಯದ 892.25 ಗ್ರಾಂ ಚಿನ್ನ, ರೂ4.01 ಲಕ್ಷ ಮೌಲ್ಯದ 4.75 ಕೆ.ಜಿ ಬೆಳ್ಳಿ ಆಭರಣ ವಾಹನದಲ್ಲಿತ್ತು. ದಾಖಲೆಗಳಿದ್ದರೂ ತೆರಿಗೆ ಪಾವತಿಗೆ ಸಂಬಂಧಿಸಿದ ದಾಖಲೆಗಳು ಇರಲಿಲ್ಲ. ಹೀಗಾಗಿ ವಶಕ್ಕೆ ಪಡೆಯಲಾಗಿದೆ' ಎಂದು ಅಧಿಕಾರಿಗಳು ತಿಳಿಸಿದ್ದಾರೆ.

ಕಳೆದ 24 ಗಂಟೆಯ ಅವಧಿಯಲ್ಲಿ ಜಿಲ್ಲೆಯ ವಿವಿಧೆಡೆ ಅಬಕಾರಿ ಇಲಾಖೆಯಿಂದ ರೂ23 ಸಾವಿರ ಮೌಲ್ಯದ 54 ಲೀ ಅಕ್ರಮ ಮದ್ಯ ವಶಕ್ಕೆ ಪಡೆಯಲಾಗಿದೆ.

ಐಸ್‌ಕ್ರೀಂ ತಿಂದ ಬಳಿಕ ಅವಳಿ ಮಕ್ಕಳು ಸಾವು

ಮಂಡ್ಯ: ಐಸ್‌ಕ್ರೀಂ ತಿಂದ ಬಳಿಕ ಅವಳಿ ಮಕ್ಕಳು ಅನುಮಾನಾಸ್ಪದವಾಗಿ ಸಾವಿಗೀಡಾಗಿರುವ ಘಟನೆ ಜಿಲ್ಲೆಯ ಶ್ರೀರಂಗಪಟ್ಟಣದ ತಾಲೂಕಿನ ಬೆಟ್ಟಹಳ್ಳಿ ಗ್ರಾಮದಲ್ಲಿ ನಡೆದಿದೆ. ನಿನ್ನೆ ಸಂಜೆ ಗ್ರಾಮಕ್ಕೆ ಐಸ್ ಕ್ರೀಂ ಮಾರಲು ಬಂದಿದ್ದ ವ್ಯಕ್ತಿಯಿಂದ ಐಸ್ ಕ್ರೀಂ ಖರೀದಿಸಿ ತಾಯಿ ಮತ್ತು ಮಕ್ಕಳು ತಿಂಧಿದ್ದರು ಎನ್ನಲಾಗಿದೆ.

ಮಕ್ಕಳ ಮೃತ ದೇಹ ಮಿಮ್ಸ್ ಆಸ್ಪತ್ರೆಗೆ ರವಾನೆ ತಾಯಿಗೆ ಆಸ್ಪತ್ರೆಯಲ್ಲಿ ಚಿಕಿತ್ಸೆ ಪಡೆಯುತ್ತಿದ್ದರೆ ಎನ್ನಲಾಗಿದೆ. ಐಸ್ ಕ್ರೀಂ ಮಾರಲು ಬಂದಿದ್ದ ವ್ಯಕ್ತಿಗಾಗಿ ಪೊಲೀಸರ ಹುಡುಕಾಟ ಮಾಡಲಾಗಿದೆ. ಅರೆಕೆರೆ ಪೊಲೀಸ್ ಠಾಣಾ ವ್ಯಾಪ್ತಿಯಲ್ಲಿ ಪ್ರಕರಣ ದಾಖಲಾಗಿದೆ.

ಹುಬ್ಬಳ್ಳಿ ಕಾರ್ಪೋರೇಟರ್ ಮಗಳ ಬರ್ಬರ ಕೊಲೆ: ಮುಗ್ಗಿಲು ಮುಟ್ಟಿದ ಕುಟುಂಬಸ್ಥರ ಆಕ್ರಂದನ

ಹುಬ್ಬಳ್ಳಿ: ಹು–ಧಾರವಾಡ ಮಹಾನಗರ ಪಾಲಿಕೆ ಸದಸ್ಯನ ಮಗಳನ್ನು ದುಷ್ಕರ್ಮಿಗಳು ಬರ್ಬರವಾಗಿ ಹತ್ಯೆಗೈದಿರುವ ಘಟನೆ ಹುಬ್ಬಳ್ಳಿ ಪ್ರತಿಷ್ಠಿತ ಬಿವಿಬಿ ಕಾಲೇಜ್ ನಲ್ಲಿ ನಡೆದಿದೆ.

ಹಾಡಹಗಲೇ ಪ್ರತಿಷ್ಠಿತ ಕಾಲೇಜು ಕ್ಯಾಂಪಸ್‌ನಲ್ಲಿ ವಿದ್ಯಾರ್ಥಿನಿಯ ಚಾಕು ಇರಿದು ಬರ್ಬರವಾಗಿ ಹತ್ಯೆ ಮಾಡಲಾಗಿದೆ. ಸ್ನೇಹಾ ಹಿರೇಮಠ್ ಮೃತ ದುರ್ದೈವಿ. ಸ್ನೇಹಾ ಹುಬ್ಬಳ್ಳಿ ಮಹಾನಗರ ಪಾಲಿಕೆಯ ಸದಸ್ಯ ನಿರಂಜನ ಹಿರೇಮಠ ಪುತ್ರಿ.

ಹುಬ್ಬಳ್ಳಿಯ ಬಿವಿಬಿ ಕಾಲೇಜ್ ಕ್ಯಾಂಪಸ್‌ನಲ್ಲಿ ಈ ದಾರುಣ ಘಟನೆ ನಡೆದಿದೆ. ಶಾಂತವಾಗಿದ್ದ ಹುಬ್ಬಳ್ಳಿ ನಗರದಲ್ಲಿ ಮತ್ತೆ ಚಾಕು ಇರಿತದ ಕ್ರೌರ್ಯ ಸದ್ದು ಮಾಡಿದೆ. ಸ್ನೇಹಾ ಹಿರೇಮಠ ಕುತ್ತಿಗೆಗೆ ಚಾಕು ಇರಿದ ಯುವಕ ಪರಾರಿಯಾಗಿದ್ದಾನೆ. ತೀವ್ರವಾಗಿ ಗಾಯಗೊಂಡಿದ್ದ ಸ್ನೇಹಾನನ್ನು ಕಿಮ್ಸ್ ಆಸ್ಪತ್ರೆಗೆ ಕರೆತರುವ ಮಾರ್ಗದಲ್ಲಿಯೇ ಸಾವನ್ನಪ್ಪಿದ್ದಾರೆ.

ಪ್ರೀತಿ ನಿರಾಕರಿಸಿದ್ದಕ್ಕೆ ಚಾಕು ಹಾಕಿದ ಫಯಾಜ್ ಕೊಲೆಯಾದ ನೇಹಾ ಹಿರೇಮಠ ಬಿವಿಬಿ ಕಾಲೇಜಿನಲ್ಲಿ ಎಂಸಿಎ ಓದುತ್ತಿದ್ದಳು. ಇನ್ನು ಕೊಲೆ ಆರೋಪಿ ಫಯಾಜ್ ಸಹ ಅದೇ ಕಾಲೇಜಿನಲ್ಲಿ ಬಿಸಿಎ ವ್ಯಾಸಂಗ ಮಾಡುತ್ತಿದ್ದಾನೆ. ಹೀಗಾಗಿ ಪ್ರೀತಿ ಮಾಡಲು ನಿರಾಕರಿಸಿದ್ದಕ್ಕೆ ನೇಹಾಳನ್ನು ಕೊಲೆ ಮಾಡಿದ್ದಾನೆ. ಕಳೆದ ಕೆಲ ದಿನಗಳಿಂದ ಪ್ರೀತಿಸುವಂತೆ ನೇಹಾಳ ಬೆನ್ನುಬಿದ್ದಿದ್ದ. ಆದ್ರೆ, ನೇಹಾ ಪ್ರೀತಿಗೆ ನಿರಾಕರಿಸಿದ್ದಳು. ಇದರಿಂದ ಕೋಪಗೊಂಡು ಫಯಾಜ್, ನೇಹಾಳ ಕುತ್ತಿಗೆಯ 2 ಕಡೆ ಚಾಕುವಿನಿಂದ ಇರಿದು ಕೊಲೆ ಮಾಡಿದ್ದಾನೆ ಎಂದು ತಿಳಿದುಬಂದಿದೆ.

ನಟಿ ಶಿಲ್ಪಾಶೆಟ್ಟಿ, ರಾಜ್ ಕುಂದ್ರಾ ದಂಪತಿಗೆ ಬಿಗ್ ಶಾಕ್; 98 ಕೋಟಿ ರೂ. ಆಸ್ತಿ ಜಪ್ತಿ

ಮುಂಬೈ: ಬಾಲಿವುಡ್ ನಟಿ ಶಿಲ್ಪಾಶೆಟ್ಟಿ ಹಾಗೂ ಉದ್ಯಮಿ ರಾಜ್ ಕುಂದ್ರಾ ದಂಪತಿಗೆ ಮತ್ತೊಂದು ಸಂಕಷ್ಟ ಎದುರಾಗಿದೆ. ಜಾರಿ ನಿರ್ದೇಶನಾಲಯ ಬರೋಬ್ಬರಿ 98 ಕೋಟಿ ರೂಪಾಯಿ ಮೌಲ್ಯದ ಆಸ್ತಿ ಹಾಗೂ ಶಿಲ್ಪಾ ಶೆಟ್ಟಿ ಅವರು ಫ್ಲಾಟ್ ಅನ್ನು ವಶಕ್ಕೆ ಪಡೆದಿದೆ.

ಅಕ್ರಮ ಹಣ ವರ್ಗಾವಣೆ ಪ್ರಕರಣ ತನಿಖೆ ನಡೆಸುತ್ತಿರುವ ಇಆ ಇಂದು ರಾಜ್ ಕುಂದ್ರಾ ಅವರಿಗೆ ಸಂಬಂಧ ಪಟ್ಟ 97.79 ಕೋಟಿ ರೂಪಾಯಿ ಆಸ್ತಿಯನ್ನು ವಶಕ್ಕೆ ಪಡೆದಿದೆ. ಇದರ ಜೊತೆಗೆ ಮುಂಬೈನ ಜುಹುನಲ್ಲಿರುವ ಫ್ಲಾಟ್ ಅನ್ನು ತನ್ನ ಸುಪರ್ದಿಗೆ ಪಡೆದುಕೊಂಡಿದೆ. ಜುಹುನಲ್ಲಿರುವ ಫ್

ಮಧ್ಯ ಮಾರಾಟ ಅಂಗಡಿಗಳ ಬಂದ್ ಮೇ.07 ಹಾಗೂ ಜೂ.04 ರಂದು

ಬೆಳಗಾವಿ: ಲೋಕಸಭಾ ಚುನಾವಣೆ–2024 ಬೆಳಗಾವಿ ಜಿಲ್ಲೆಯಲ್ಲಿ ಮೇ.7 ರಂದು ಮತದಾನವು ಹಾಗೂ ಜೂ.4 ರಂದು ಮತ ಎಣಿಕೆಯು ಜರುಗಲಿರುತ್ತದೆ.

ಮತದಾನ ಮುಕ್ತಾಯವಾಗುವ 48 ಗಂಟೆಗಳ ಅವಧಿಯೊಳಗಿನ ದಿನಗಳು ಮತ್ತು ಮತ ಎಣಿಕೆ ದಿನದಂದು ಹಾಗೂ ಚುನಾವಣಾ ಸಂದರ್ಭದಲ್ಲಿ ಕಾನೂನು ಸುವ್ಯವಸ್ಥೆ ಕಾಪಾಡುವ ದೃಷ್ಟಿಯಿಂದ ಯಾವುದೇ ಅಹಿತಕರ ಘಟನೆಗಳು ನಡೆಯದಂತೆ ಮುಂಜಾಗ್ರತಾ ಕ್ರಮವಾಗಿ ಜಿಲ್ಲಾಯಾದ್ಯಂತ ಎಲ್ಲ ಮದ್ಯದ ಮಾರಾಟ ಮಳಿಗೆಗಳನ್ನು ಬಂದ್ ಇಡುವಂತೆ ಮುಖ್ಯ ಚುನಾವಣಾಧಿಕಾರಿಗಳು ಆದೇಶವನ್ನು ಹೋರಡಿಸಲಾಗಿದೆ.

ಬೆಳಗಾವಿ ಜಿಲ್ಲೆಯಾದ್ಯಂತ ಮೇ.5 ರಂದು ಸಂಜೆ 6 ಗಂಟೆಯಿಂದ ಮೇ.8 ಬೆಳಿಗ್ಗೆ 11 ಗಂಟೆಯವರೆಗೆ ಹಾಗೂ ಮತ ಎಣಿಕೆ ಜೂ.4 ರಂದು ಬೆಳಿಗ್ಗೆ 6 ಗಂಟೆಯಿಂದ ಜೂ.5 ಮುಂಜಾನೆ 6 ಗಂಟೆಯವರೆಗೆ ಎಲ್ಲ ಮದ್ಯದ ಅಂಗಡಿ, ಎಲ್ಲ ರೀತಿಯ ಮದ್ಯ ತಯಾರಿಕಾ ಘಟಕಗಳು, ಸಾಗಾಣಿಕೆ, ಸಂಗ್ರಹಣೆಯನ್ನು, ಮಾರಾಟ ಮಳಿಗೆಗಳನ್ನು ಬಂದ್ ಮಾಡುವಂತೆ ಪ್ರಜಾ ಪ್ರತಿನಿಧಿ ಕಾಯ್ದೆ 1951 ರ ಕಲಂ 135 ಅ ರನ್ವಯ ಆದೇಶವನ್ನು ಹೊರಡಿಸಲಾಗಿದೆ

ಸದರಿ ಆದೇಶದಲ್ಲಿಯ ಸೂಚನೆಯನ್ನು ಉಲ್ಲಂಘಿಸಿದಲ್ಲಿ ಅಂಥ–ವರು ಪ್ರಜಾ ಪ್ರತಿನಿಧಿ ಕಾಯ್ದೆ 1951 ರ ಕಲಂ 135 ಅ (2) ಮತ್ತು (3) ರನ್ವಯ ಶಿಕ್ಷೆಗೆ ಒಳಪಡುವರು.

ಅಬಕಾರಿ ಉಪ ಆಯುಕ್ತರು, ಅಬಕಾರಿ ಅಧೀಕ್ಷಕರು, ಮತ್ತು ಅಬಕಾರಿ ಉಪ ಅಧೀಕ್ಷಕರು, ಬೆಳಗಾವಿ ಉತ್ತರ/ಬೆಳಗಾವಿ ದಕ್ಷಿಣ ಇವರು ಸದರಿ ದಿನಗಳಂದು ಮದ್ಯ ಮಾರಾಟ ಆಗದಂತೆ ಕಟ್ಟುನಿಟ್ಟಾಗಿ ನಿಗಾ ವಹಿಸಬೇಕು ಎಂದು ಜಿಲ್ಲಾ ಚುನಾವಣಾಧಿಕಾರಿ ಹಾಗೂ ಜಿಲ್ಲಾ ದಂಡಾಧಿಕಾರಿಗಳಾದ ನಿತೇಶ್ ಪಾಟೀಲ ಅವರು ಆದೇಶಿಸಿದ್ದಾರೆ.

ಲೋಕಸಭಾ ಚುನಾವಣೆ: ಬೆಳಗಾವಿ ಜಿಲ್ಲೆಗೆ ಸಾಮಾನ್ಯ ವೀಕ್ಷಕರು, ಪೊಲೀಸ್ ವೀಕ್ಷಕರ ಆಗಮನ, ಸಾರ್ವಜನಿಕ ಭೇಟಿಗೆ ಲಭ್ಯ

ಬೆಳಗಾವಿ: ಲೋಕಸಭಾ ಚುನಾವಣೆ–2024 ರ ಹಿನ್ನೆಲೆಯಲ್ಲಿ 01–ಚಿಕ್ಕೋಡಿ ಮತ್ತು 02–ಬೆಳಗಾವಿ ಲೋಕಸಭಾ ಕ್ಷೇತ್ರಗಳಿಗೆ ಚುನಾವಣಾ ಆಯೋಗವು ನಿಯೋಜಿಸಿರುವ ಸಾಮಾನ್ಯ ವೀಕ್ಷಕರು ಹಾಗೂ ಪೊಲೀಸ್ ವೀಕ್ಷಕರು ಜಿಲ್ಲೆಗೆ ಆಗಮಿಸಿದ್ದು, ಸಾರ್ವಜನಿಕರ ಭೇಟಿಗೆ ಲಭ್ಯವಿರುತ್ತಾರೆ ಎಂದು ಜಿಲ್ಲಾ ಚುನಾವಣಾಧಿಕಾರಿ ನಿತೇಶ್ ಪಾಟೀಲ ಅವರು ತಿಳಿಸಿದ್ದಾರೆ.

02–ಬೆಳಗಾವಿ ಲೋಕಸಭಾ ಕ್ಷೇತ್ರ ಸಾಮಾನ್ಯ ವೀಕ್ಷಕರು:

ಶ್ರೀ ಎಂ.ಕೆ. ಅರವಿಂದಕುಮಾರ್(ಐ.ಎ.ಎಸ್), ಮೊಬೈಲ್ ಸಂಖ್ಯೆ– 7338201395; ಬೆಳಗಾವಿ ಪಿಡಬ್ಲ್ಯುಡಿ ಹೊಸ ಐ.ಬಿ. ಕೊಠಡಿ ಸಂಖ್ಯೆ –5;

ಸಾರ್ವಜನಿಕ ಭೇಟಿ ಸ್ಥಳ–ಸಮಯ: ಮೀಟಿಂಗ್ ಹಾಲ್, ಮೊದಲ ಮಹಡಿ, ಸರ್ಕ್ಯೂಟ್ ಹೌಸ್, ಬೆಳಗಾವಿ ಬೆಳಿಗ್ಗೆ 10 ರಿಂದ 11 ಗಂಟೆ.

01–ಚಿಕ್ಕೋಡಿ ಲೋಕಸಭಾ ಕ್ಷೇತ್ರ ಸಾಮಾನ್ಯ ವೀಕ್ಷಕರು:

ಶ್ರೀ ಜಿ.ಎಸ್.ಪಾಂಡಾ ದಾಸ್(ಐ.ಎ.ಎಸ್), ಮೊಬೈಲ್ ಸಂಖ್ಯೆ–7349611395; ನಿಪ್ಪಾಣಿ, ಪಿಡಬ್ಲ್ಯುಡಿ ವಿ.ಐ.ಪಿ. ಸೂಟ್ ಸಂಖ್ಯೆ –1;

ಸಾರ್ವಜನಿಕ ಭೇಟಿ ಸಮಯ: ಬೆಳಿಗ್ಗೆ 10 ರಿಂದ 11 ಗಂಟೆ.

ಪೊಲೀಸ್ ವೀಕ್ಷಕರ ನೇಮಕ:

02–ಬೆಳಗಾವಿ ಮತ್ತು 01–ಚಿಕ್ಕೋಡಿ ಲೋಕಸಭಾ ಕ್ಷೇತ್ರಗಳಿಗೆ ಪೊಲೀಸ್ ವೀಕ್ಷಕರಾಗಿ ಹಿರಿಯ ಐಪಿಎಸ್ ಅಧಿಕಾರಿ ಪವನಕುಮಾರ್, ಮೊಬೈಲ್ ಸಂಖ್ಯೆ–8123241395; ಬೆಳಗಾವಿ ಪಿಡಬ್ಲ್ಯುಡಿ ಹೊಸ ಐ.ಬಿ. ಕೊಠಡಿ ಸಂಖ್ಯೆ –4;

ಸಾರ್ವಜನಿಕ ಭೇಟಿ ಸಮಯ: ಬೆಳಿಗ್ಗೆ 10 ರಿಂದ 11 ಗಂಟೆ.

ಲೋಕಸಭಾ ಚುನಾವಣೆಗೆ ಸಂಬಂಧಿಸಿದಂತೆ ಸಾರ್ವಜನಿಕರು ನಿಗದಿತ ಸಮಯ ಹಾಗೂ ಸ್ಥಳದಲ್ಲಿ ಸಾಮಾನ್ಯ ವೀಕ್ಷಕರು ಮತ್ತು ಪೊಲೀಸ್ ವೀಕ್ಷಕರನ್ನು ಭೇಟಿ ಮಾಡಬಹುದು ಎಂದು ಜಿಲ್ಲಾ ಚುನಾವಣಾಧಿಕಾರಿ ನಿತೇಶ್ ಪಾಟೀಲ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಬೆಳಗಾವಿ ಕ್ಷೇತ್ರದಲ್ಲಿ ಬದಲಾವಣೆಯ ಗಾಳಿ ಬೀಸಲಿದೆ: ಸಚಿವೆ ಲಕ್ಷ್ಮೀ ಹೆಬ್ಬಾಳ್ಕರ್

ಬೆಳಗಾವಿ: ಬೆಳಗಾವಿ ಜಿಲ್ಲೆಯಲ್ಲಿ ಈ ಬಾರಿ ಬದಲಾವಣೆಯ ಗಾಳಿ ಬೀಸಲಿದೆ. ಸೂರ್ಯ ಪೂರ್ವದಲ್ಲಿ ಹುಟ್ಟುವುದೆಷ್ಟು ಸತ್ಯವೋ ಕಾಂಗ್ರೆಸ್ ಅಭ್ಯರ್ಥಿಗಳು ಜಯಗಳಿಸುವುದು ಅಷ್ಟೇ ಸತ್ಯ ಎಂದು ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಸಚಿವರಾದ ಲಕ್ಷ್ಮೀ ಹೆಬ್ಬಾಳ್ಕರ್ ಹೇಳಿದರು.

ರಾಮದುರ್ಗ ವಿಧಾನಸಭಾ ಕ್ಷೇತ್ರದ ಮುದೇನೂರ್, ಬಟಕುರ್ಕಿ, ಸಾಲಾಪೂರ, ಉದುಪುಡಿ ಹಾಗೂ ಕುಳ್ಳೂರ್ ಗ್ರಾಮಗಳಲ್ಲಿ ಕಾಂಗ್ರೆಸ್ ಅಭ್ಯರ್ಥಿ ಮೃಣಾಲ್ ಹೆಬ್ಬಾಳ್ಕರ್ ಪರ ಮತಯಾಚಿಸಿದ ಸಚಿವರು, ಬದ್ಧತೆಗೆ ಹೆಸರಾಗಿರುವ ಕಾಂಗ್ರೆಸ್ ಪಕ್ಷವನ್ನು ಬೆಂಬಲಿಸಬೇಕು ಎಂದು ಕರೆ ನೀಡಿದರು.

ಕಾಂಗ್ರೆಸ್ ಪಕ್ಷ ಎಂದೂ ಕೊಟ್ಟ ಮಾತನ್ನು ತಪ್ಪಿಲ್ಲ. ಇದಕ್ಕೆ ಪಂಚ ಗ್ಯಾರಂಟಿ ಯೋಜನೆಗಳೆ ಸಾಕ್ಷಿ. ಸುಮಾರು 1.20 ಕೋಟಿ ಮಹಿಳೆಯರಿಗೆ ಗೃಹಲಕ್ಷ್ಮಿ ಯೋಜನೆಯ ಹಣ ತಲುಪುತ್ತಿದ್ದು, ಬಡ ಮಹಿಳೆಯರ ಹಸಿವನ್ನು ನೀಗಿಸುತ್ತಿದೆ ಎಂದರು. ಕೇವಲ ಮತಗಳನ್ನು ಪಡೆದುಕೊಳ್ಳುವುದಷ್ಟೆ ಮುಖ್ಯ ಅಲ್ಲ. ಸದಾ ಬಡವರ ಅಭಿವೃದ್ಧಿಗೆ ಚಿಂತಿಸುವ ಪಕ್ಷ ಎಂದರೆ ಕಾಂಗ್ರೆಸ್ ಪಕ್ಷ ಎಂದು ಸಚಿವರು ಹೇಳಿದರು. ಕರೋನಾ, ಬೆಲೆ ಏರಿಕೆಯಿಂದ ತತ್ತರಿಸಿದ್ದ ಜನರಿಗೆ ಪಂಚ ಗ್ಯಾರಂಟಿ ಯೋಜನೆಗಳಿಂದ ಸಾಕಷ್ಟು ಸಹಾಯವಾಗಿದೆ ಎಂದು ಸಚಿವೆ ಲಕ್ಷ್ಮೀ ಹೆಬ್ಬಾಳ್ಕರ್ ಹೇಳಿದರು.

ಕಳೆದ 12 ವರ್ಷಗಳಿಂದ ಸಮಾಜ ಸೇವೆಯಲ್ಲಿ ತೊಡಗಿಸಿಕೊಂಡಿರುವ ನನ್ನ ಮಗ ಮೃಣಾಲ್ ಹೆಬ್ಬಾಳ್ಕರ್, ಜಿಲ್ಲಾ ಯುವ ಕಾಂಗ್ರೆಸ್ ಉಪಾಧ್ಯಕ್ಷರಾಗಿ ಸೇವೆ ಸಲ್ಲಿಸಿದ್ದು, ಕರೋನಾ ವೇಳೆ, ಪ್ರವಾಹದ ವೇಳೆ ಜನರ ಕಷ್ಟ ಸುಖಗಳಿಗೆ ಸ್ಪಂದಿಸಿದ್ದಾನೆ.

ಮೃಣಾಲ್ ಗೆದ್ದು ಸಂಸತ್ ಗೆ ಹೋದರೆ ನಿಮ್ಮ ಮನೆ ಮಗನಾಗಿ ಕೆಲಸ ಮಾಡಲಿದ್ದಾನೆ ಎಂದು ಹೇಳಿದರು. ಮುಖ್ಯಮಂತ್ರಿ ಸಿದ್ದರಾಮಯ್ಯ ನವರ ಆಶೀರ್ವಾದದಿಂದ ಮೃಣಾಲ್ ಸ್ಪರ್ಧೆ ಮಾಡಿದ್ದಾನೆ ಎಂದರು.

ಬಿಜೆಪಿಯ ಅಭ್ಯರ್ಥಿ ಬಗ್ಗೆ ಬಿಜೆಪಿಯಲ್ಲೇ ಅಪಸ್ವರವಿದ್ದು, ಅಲ್ಲಿ ಒಗ್ಗಟ್ಟಿನ ಕೊರತೆ ಕಾಡುತ್ತಿದೆ. ನಿಮ್ಮ ಮನೆ ಮಗ ಮೃಣಾಲ್ ಹೆಬ್ಬಾಳ್ಕರ್ ಬೆಂಬಲಿಸಿ, ಬೆಳಗಾವಿ ಅಭಿವೃದ್ಧಿಗೆ ಕೈಜೋಡಿಸಿ. ಕಾಂಗ್ರೆಸ್ ಅಭ್ಯರ್ಥಿ ಯುವಕನಾಗಿದ್ದು, ಆತನ ಶಕ್ತಿ ಮೀರಿ ಕ್ಷೇತ್ರದ ಅಭಿವೃದ್ಧಿಗೆ ಶ್ರಮಿಸಲಿದ್ದಾನೆ ಎಂದು ಹೇಳಿದರು. ಈ ಹಿಂದೆ ಜಿಲ್ಲೆಗೆ ಸಾಕಷ್ಟು ಅನ್ಯಾಯ ಮಾಡಿರುವ ಜಗದೀಶ್ ಶೆಟ್ಟರ್ ಅವರನ್ನು ಜನರು ತಿರಸ್ಕರಿಸಬೇಕು. ಮುಖ್ಯಮಂತ್ರಿ ಆದ ಬಳಿಕ ಕ್ಯಾಬಿನೆಟ್ ಸಚಿವರಾದ ಕರ್ನಾಟಕದ ಏಕೈಕ ಸಚಿವ ಎಂದರೆ ಅದು ಶೆಟ್ಟರ್. ಇದು ಅವರ ಅಧಿಕಾರ ದಾಹವನ್ನು ತೋರಿಸುತ್ತದೆ ಎಂದು ಸಚಿವರು ಕಿಡಿಕಾರಿದರು.

ಕಾಂಗ್ರೆಸ್ ಮುಖಂಡರಾದ ಪ್ರದೀಪ್ ಪಟ್ಟಣ್, ಕೆಪಿಸಿಸಿ ಸದಸ್ಯರಾದ ರಾಜೇಂದ್ರ ಪಾಟೀಲ್, ರಂಗನಗೌಡ, ಸುರೇಶ್ ಪತ್ತೆಪೂರ , ರಾಮಣ್ಣ ಬಿಡಕಿ, ಸಂಗಪ್ಪ ಪ್ಯಾಟಿಗೌಡರ, ಬೇನಪ್ಪ ತಿಮ್ಮಾಪೂರ, ನಿಂಗಪ್ಪ ಬಾರ್ಕೆ, ಈರಪ್ಪ ತಳವಾರ, ತುಕಾರಾಂ ದಾಸರ, ಹಾಸ್ಯ ನಟ ರಾಜು ತಾಳಿಕೋಟೆ ಸೇರಿದಂತೆ ನೂರಾರು ಜನ ಉಪಸ್ಥಿತರಿದ್ದರು.

ವಸತಿ ಯೋಜನೆಯಲ್ಲಿ ವಂಚನೆ ಮಾಡಿದ ಪಿಡಿಒಗೆ ಜೈಲು ಶಿಕ್ಷೆ

ಕಲಬುರಗಿ: ಇಂದಿರಾ ಆವಾಸ ಯೋಜನೆಯಡಿ ಮಂಜೂರಾದ ಮನೆಗಳನ್ನು ನಿರ್ಮಿಸದೆ ನಕಲಿ ಕಾಗದ ಸೃಷ್ಟಿಸಿ, ಸರ್ಕಾರವನ್ನು ವಂಚಿಸಿದ ಆರೋಪ ಸಾಬೀತು ಆಗಿದ್ದರಿಂದ ಚಿಂಚೋಳಿಯ ಜೆಎಂಎಫ್‌ಸಿ ನ್ಯಾಯಾಲಯವು ಅಪರಾಧಿ ಪಿಡಿಒಗೆ 1 ವರ್ಷ ಜೈಲು ಶಿಕ್ಷೆ ಹಾಗೂ 90 ಸಾವಿರ ದಂಡ ವಿಧಿಸಿದೆ.

ಚಿಂಚೋಳಿ ತಾಲ್ಲೂಕಿನ ಚೆಂಗಟಾ ಗ್ರಾಮ ಪಂಚಾಯಿತಿಗೆ 2009–10ನೇ ಸಾಲಿನಲ್ಲಿ ಇಂದಿರಾ ಆವಾಸ ಯೋಜನೆ ಅಡಿ ಮನೆಗಳು ಮಂಜೂರು ಆಗಿದ್ದವು.

ಪಂಚಾಯಿತಿ ಅಧ್ಯಕ್ಷ, ಪಿಡಿಒ ಹಾಗೂ ಕೆಲವು ಸದಸ್ಯರು ಸೇರಿ ಮನೆಗಳನ್ನು ನಿರ್ಮಾಣ ಮಾಡದೆ, ಸರ್ಕಾರವನ್ನು ವಂಚಿಸಿದ್ದರು. ಈ ಬಗ್ಗೆ ರಟಕಲ್ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿತ್ತು. ಪಿಎಸ್‌ಐ ಅಕ್ಕಮಹಾದೇವಿ ಅವರು ತನಿಖೆ ನಡೆಸಿ, ದೋಷಾರೋಪಣೆ ಪಟ್ಟಿಯನ್ನು ನ್ಯಾಯಾಲಯಕ್ಕೆ ಸಲ್ಲಿಸಿದ್ದರು.

ವಿಚಾರಣೆ ನಡೆಸಿದ ಜೆ–ಎಂಎಫ್‌ಸಿ ನ್ಯಾಯಾಲಯದ ನ್ಯಾಯಾಧೀಶ ದತ್ತಕುಮಾರ ಅವರು, ಗ್ರಾ.ಪಂ ಅಧ್ಯಕ್ಷರಾಗಿದ್ದ ಜ್ಯೋತಿ ರಾಠೋಡ ಅವರಿಗೆ 6 ತಿಂಗಳು ಸಾದಾ ಜೈಲು ಶಿಕ್ಷೆ, 50,000 ದಂಡ, ಬಾಬು ಪೋಮು ಅವರಿಗೆ 6 ತಿಂಗಳ ಸಾದಾ ಜೈಲು ಶಿಕ್ಷೆ, 40,000 ದಂಡ, ಪಿಡಿಒ ಅಶೋಕ ಚನ್ನಪ್ಪ ಅವರಿಗೆ 1 ವರ್ಷ ಜೈಲು ಶಿಕ್ಷೆ, 90 ಸಾವಿರ ದಂಡ, ಪಂಚಾಯಿತಿ ಸದಸ್ಯರಾದ ಖ್ಯಾದಮ್ಮ ಶಂಕ್ರೆಪ್ಪ ಮತ್ತು ಸುವರ್ಣಾ ಅಂಬರಾಯ ಅವರಿಗೆ ತಲಾ 5,000 ದಂಡ ವಿಧಿಸಿ ಆದ–ೇಶಿಸಿದ್ದಾರೆ. ಸರ್ಕಾರದ ಪರವಾಗಿ ಸಹಾಯಕ ಅಭಿಯೋಜಕ ಶಾಂತಕುಮಾರ ಜಿ.ಪಾಟೀಲ ವಾದ ಮಂಡಿಸಿದರು.

ಪ್ರಿಯಂಕಾ ಜಾರಕಿಹೊಳಿ 9.11 ಕೋಟಿ ಮೌಲ್ಯದ ಆಸ್ತಿ ಒಡತಿ

ಬೆಳಗಾವಿ: ಚಿಕ್ಕೋಡಿ ಲೋಕಸಭಾ ಕ್ಷೇತ್ರದ ಕಾಂಗ್ರೆಸ್ ಅಭ್ಯರ್ಥಿಯಾಗಿ ನಾಮಪತ್ರ ಸಲ್ಲಿಸಿರುವ ಲೋಕೋಪಯೋಗಿ ಮತ್ತು ಜಿಲ್ಲಾ ಉಸ್ತುವಾರಿ ಸಚಿವ ಸತೀಶ ಜಾರಕಿಹೊಳಿ ಅವರ ಪುತ್ರಿ, ಯುವ ನಾಯಕಿ ಪ್ರಿಯಂಕಾ ಜಾರಕಿಹೊಳಿ ಅವರು 9.11 ಕೋಟಿ ರೂ. ಮೌಲ್ಯದ ಆಸ್ತಿಯ ಒಡತಿಯಾಗಿದ್ದಾರೆ.

ತಮ್ಮ ನಾಮಪತ್ರದೊಂದಿಗೆ ಅವರು ಚುನಾವಣಾ ಆಯೋಗಕ್ಕೆ ಸಲ್ಲಿಸಿರುವ ತಮ್ಮ ಆಸ್ತಿ ಕುರಿತು ಅಫಿಡವೀಡ್‌ನಲ್ಲಿ ಘೋಷಣೆ ಮಾಡಿದ್ದಾರೆ.

ಎಂಬಿಎ ಪದವೀಧರೆ ಆಗಿರುವ ಪ್ರಿಯಂಕಾ ಅವರು ಉದ್ಯಮಿಯೂ ಹೌದು. ಸತೀಶ ಶುಗರ್ಸ, ಬೆಳಗಾಮ್ ಶುಗರ್ಸ ಸೇ–ರಿದಂತೆ ವಿವಿಧ ಸಂಸ್ಥೆಗಳಲ್ಲಿ ನಿರ್ದೇಶಕರಾಗಿದ್ದಾರೆ. ಕೆಲವು ಉದ್ಯಮಗಳಲ್ಲಿ ಪಾಲುದಾ–ರಿಕೆಯನ್ನು ಹೊಂದಿದ್ದಾರೆ.

ಪ್ರಿಯಂಕಾ ಜಾರಕಿಹೊಳಿ ಅವರು 72913956 ರೂ. ಮೌಲ್ಯದ ಚರಾಸ್ತಿ, 18243688 ರೂ. ಮೌಲ್ಯದ ಸ್ಥಿರಾಸ್ತಿ ಸೇರಿದಂತೆ ಒಟ್ಟು 91157644 ರೂ. ಮೌಲ್ಯದ ಆಸ್ತಿ ಒಡತಿಯಾಗಿದ್ದಾರೆ. ತಂದೆ ಸತೀಶ ಜಾರಕಿಹೊಳಿ 14718768 ರೂ. ಹಾಗೂ ತಾಯಿ ಎಸ್.ಎಸ್. ಜಾರಕಿಹೊಳಿ ಹೆಸರಿನಲ್ಲಿ 1025000 ರೂ. ಸೇ–ರಿದಂತೆ ಒಟ್ಟು 15743768 ರೂ. ಕೈಗಡ ಸಾಲ ಪಡೆದುಕೊಂಡಿದ್ದಾರೆ. 487965 ರೂ. ನಗದು ಹಣವನ್ನು ಹೊಂದಿದ್ದಾರೆ.

ನಾಮಪತ್ರ ಸಲ್ಲಿಸಲು ಆನೆ ಪ್ರತಿಮೆ ಏರಿ ಬಂದ ಅಭ್ಯರ್ಥಿ

ಕಲಬುರಗಿ: ನಗರದಲ್ಲಿ ಗುರುವಾರ ನಾಮಪತ್ರ ಸಲ್ಲಿಕೆ ಭರಾಟೆ ಆರಂಭವಾಗಿದ್ದು, ಗುರುವಾರ ಮಧ್ಯಾಹ್ನ ಬಿಜೆಪಿ ಅಭ್ಯರ್ಥಿ ಡಾ. ಉಮೇಶ್ ಜಾಧವ್ ನಾಮಪತ್ರ ಸಲ್ಲಿಕೆಗೆ ಜಿಲ್ಲಾ ಚುನಾವಣಾ ಅಧಿಕಾರಿ ಕಚೇರಿಗೆ ಆಗಮಿಸಿದ್ದರು. ಅವರೊಂದಿಗೆ ಬಿಜೆಪಿ ರಾಜ್ಯಾಧ್ಯಕ್ಷ ವಿಜಯೇಂದ್ರ ಹಾಗೂ ಶಾಸಕರು, ಮಾಜಿ ಶಾಸಕರು ಆಗಮಿಸಿದ್ದರು.

ಆದರೆ ಅವರ ವಾಹನ ಕಚೇರಿ ಆವರಣದಲ್ಲಿ ಬಿಡಲು 144ಕಲಂ ಅಡ್ಡಿಯಾಯಿತು. ಇದೇ ವೇಳೆ ಬಿಎಸ್ ಪಿ ಅಭ್ಯರ್ಥಿ ಹುಚ್ಚಪ್ಪ ವಡ್ಡರ್ ಆನೆಯ ಪ್ರತಿಮೆ ಮೇಲೆ ಕುಳಿತು ಮೆರವಣಿಗೆಯಲ್ಲಿ ಬಂದರು. ಅವರನ್ನು ಪೊಲೀಸರು ಒಳಬಿಟ್ಟರು.ಇದರಿಂದ ಕೆಲ ಕಾಲ ವಾಗ್ವಾದ ಉಂಟಾಯಿತು. ಆನೆಯ ಸಮೇತ ವಾಹನದಲ್ಲಿ ಅಭ್ಯರ್ಥಿ ತೆರಳಿದ್ದು ಕುತೂಹಕ ಮೂಡಿಸಿತ್ತು.ಅದಕ್ಕೂ ಮುನ್ನ ಜಿಲ್ಲಾಧಿಕಾರಿ ಕಚೇರಿ ಮುಂದೆ ಬಿಎಸ್ಪಿ ಹಾಗೂ ಬಿಜೆಪಿ ಕಾರ್ಯಕರ್ತರು, ಮುಖಂಡರು ಡಿಜೆ, ಹಲಗಿ ಬಾರಿಸಿ ಅಬ್ಬರ ತೋರಿದರು.

ನ್ಯಾಯಯುತ ಚುನಾವಣೆ ನಡೆಸಿದರೆ, ಬಿಜೆಪಿ 180 ಕ್ಕಿಂತ ಹೆಚ್ಚು ಸ್ಥಾನಗಳನ್ನು ಗೆಲ್ಲುವುದಿಲ್ಲ: ಪ್ರಿಯಾಂಕಾ ಗಾಂಧಿ

ಉತ್ತರ ಪ್ರದೇಶ: ಇವಿಎಂಗಳನ್ನು ಟ್ಯಾಂಪ–ರಿಂಗ್ ಮಾಡದೆ ನ್ಯಾಯಯುತ ಚುನಾವಣೆ ನಡೆಸಿದರೆ, ಬಿಜೆಪಿ 180 ಕ್ಕಿಂತ ಹೆಚ್ಚು ಸ್ಥಾನಗಳನ್ನು ಗೆಲ್ಲುವುದಿಲ್ಲ ಎಂದು ಕಾಂಗ್ರೆಸ್‌ನ ಪ್ರಧಾನ ಕಾರ್ಯದರ್ಶಿ ಪ್ರಿಯಾಂಕಾ ಗಾಂಧಿ ಅವರು ಹೇಳಿದ್ದಾರೆ.

ಉತ್ತರ ಪ್ರದೇಶದ ಸಹರಾನ್‌ಪುರದಲ್ಲಿ ಚುನಾವಣಾ ಪ್ರಚಾರದ ವೇಳೆ ಮಾತನಾಡಿದ ಕಾಂಗ್ರೆಸ್ ನಾಯಕಿ, ಯಾವ ಆಧಾರದ ಮೇಲೆ ಬಿಜೆಪಿ 400 ಕ್ಕೂ ಹೆಚ್ಚು ಸ್ಥಾನಗಳನ್ನು ಪಡೆಯುವ ಹೇಳಿಕೆ ನೀಡುತ್ತಿದೆ?ಎಂದು ಪ್ರಶ್ನಿಸಿದರು.

400 ಸ್ಥಾನಗಳನ್ನು ಗೆಲ್ಲುತ್ತೇವೆ ಎಂದು ಯಾವ ಆದ–ಾರದಲ್ಲಿ ಹೇಳುತ್ತಿದ್ದಾರೆ. ಅವರು ಜ್ಯೋತಿಷಿಗಳೇ?, ಒಂದೋ ಅವರು ಮೊದಲಿನಿಂದಲೂ ಏನೇನೋ ಮಾಡಿದ್ದಾರೆ. ಹೀಗಾಗಿಯೇ 400 ಹೆಚ್ಚು ಬರುತ್ತೆ ಅಂತ ಹೇಳುತ್ತಿದ್ದಾರೆಯೇ?. ಇಂದು ದೇಶದಲ್ಲಿ ಚುನಾವಣೆ ನಡೆದರೆ.. ಇವಿಎಂ ಟ್ಯಾಂಪರಿಂಗ್ ಆಗದೇ ಇದ್ದಲ್ಲಿ, ಅವರು 180 ಕ್ಕಿಂತ ಹೆಚ್ಚು ಸ್ಥಾನಗಳನ್ನು ಗಳಿಸಲು ಸಾಧ್ಯವೇ ಇಲ್ಲ ಎಂದು ನಾನು ಸಂಪೂರ್ಣ ವಿಶ್ವಾಸದಿಂದ ಹೇಳಬಲ್ಲೆ. ಅವರು 180 ಕ್ಕಿಂತ ಕಡಿಮೆ ಸ್ಥಾನಗಳನ್ನು ಗೆಲ್ಲುತ್ತಾರೆ ಎಂದು ಪ್ರಿಯಾಂಕಾ ಗಾಂಧಿ ಹೇಳಿದ್ದಾರೆ. ನಾನು ಈ ಚುನಾವಣೆಯನ್ನು ಜನರ ದೃಷ್ಟಿಕೋನದಿಂದ ನೋಡುತ್ತೇನೆ, ಜನರ ಸಮಸ್ಯೆಗಳ ಆಧಾರದ ಮೇಲೆ ಚುನಾವಣೆ ನಡೆಸಬೇಕು ಎಂದು ಒತ್ತಿ ಹೇಳಿದರು.ಈ ಚುನಾವಣೆಯು ಜನರ ಚುನಾವಣೆಯಾಗಬೇಕು, ಇದು ಜನರ ಸಮಸ್ಯೆಗಳ ಮೇಲೆ ನಡೆಯಬೇಕು ಎಂದು ನಾನು ಜನರಿಗೆ ಎಲ್ಲೆಡೆ ಹೇಳುತ್ತಿದ್ದೇನೆ ಎಂದರು.

ಕರ್ನಾಟಕದ ಸಂಸ್ಕೃತಿಯ–ಪರಂಪರೆ ಉಳಿಸಿ ಬೆಳೆಸೋಣ

ಕರ್ನಾಟಕದ ಪ್ರವಾಸವು ನಿಜಕ್ಕೂ ಅದ್ಭುತ. ಭಾರತದಲ್ಲಿರುವ ಪ್ರವಾಸಿಗರು, ಸಂದರ್ಶಕರು ತಮ್ಮ ಜೀವಿತಾವಧಿಯಲ್ಲಿ ತಪ್ಪದೇ ಕರ್ನಾಟಕ ರಾಜ್ಯದ ಪ್ರವಾಸ ಮಾಡಲೇಬೇಕು. ಇಲ್ಲಿನ ಮನೋಹರವಾದ ಗಿರಿಧಾಮಗಳು, ನಿರ್ಮಲವಾದ ನದಿಗಳು ಮತ್ತು ಸರೋವರಗಳು, ಆಹ್ಲಾದಕರವಾದ ಜಲಪಾತ, ಆಶ್ಚರ್ಯಗೊಳಿಸುವ ಐತಿಹಾಸಿಕ ತಾಣಗಳು ಎಂತವರನ್ನು ಮರಳುಗೊಳಿಸುತ್ತದೆ. ಕರ್ನಾಟಕದ ಕೆಲವು ಪ್ರವಾಸಿ ಸ್ಥಳಗಳು ಯುನೆಸ್ಕೋ ವಿಶ್ವ ಪರಂಪರೆಯ ತಾಣವಾಗಿದೆ. ಬಹುಶಃ ಲೇಖನದಲ್ಲಿ ಹೇಳಲಾಗಿರುವ ಸ್ಥಳಕ್ಕೆ ನೀವು ಈಗಾಗಲೇ ಹೋಗಿ ಬಂದಿರಬಹುದು ಅಥವಾ ಪ್ರವಾಸ ಯೋಜಿಸುವ ಮೊದಲು ತಾಣಗಳ ಆಯ್ಕೆಗಳ ಬಗ್ಗೆ ಮಾಹಿತಿ ನೀಡಲಾಗಿದೆ.

ಕರ್ನಾಟಕದಲ್ಲಿ ಗಿಓಇಖಅಔ ವಿಶ್ವ ಪರಂಪರೆಯ ತಾಣಗಳ ಪಟ್ಟಿ:– ಕರ್ನಾಟಕವು ಮೂರು ವಿಶ್ವ ಪರಂಪರೆಯ ಶಾಶ್ವತ ತಾಣಗಳು ಹಾಗೂ ಮೂರು ವಿಶ್ವ ಪರಂಪರೆಯ ತಾತ್ಕಾಲಿಕ ತಾಣಗಳ ಹೊಂದಿದೆ. ಈ ವಿಶ್ವ ಪರಂಪರೆಯ ತಾಣಗಳು ಎಲ್ಲಿವೆ? ಎಂಬುದರ ಬಗ್ಗೆ ಸಂಕ್ಷಿಪ್ತ ಪರಿಚಯ ಮಾಡಿಕೊಳ್ಳೋಣವೇ....

1) ಹಂಪಿ (1986):– ವಿಜಯನಗರ ಜಿಲ್ಲೆಯ ಹಂಪಿಯು ಭಾರತದ ಮಧ್ಯಕಾಲೀನ ಹಿಂದೂ ಸಾಮ್ರ

ಬಡವರ-ರೈತರ ಪಕ್ಷ ಅದುವೇ ಕಾಂಗ್ರೆಸ್: ಸಚಿವ ಸತೀಶ್ ಜಾರಕಿಹೊಳಿ

ಬೆಳಗಾವಿ: ಬಡವರು, ರೈತರು ಹಾಗೂ ಜನಸಾಮಾನ್ಯರ ಪರ ಕೆಲಸ ಮಾಡಿ ಅವರ ಕುಂದು ಕೊರತೆಗಳಿಗೆ ಸ್ಪಂದಿಸುವಂತಹ ಕಾಂಗ್ರೆಸ್ ಪಕ್ಷಕ್ಕೆ ಮತ ನೀಡಿ, ಚಿಕ್ಕೋಡಿ ಲೋಕಸಭಾ ಕ್ಷೇತ್ರದ ಕಾಂಗ್ರೆಸ್ ಅಭ್ಯರ್ಥಿಯಾದ ಪ್ರಿಯಂಕಾ ಅವರನ್ನು ಅತಿ ಹೆಚ್ಚು ಮತಗಳಿಂದ ಗೆಲ್ಲಿಸಿ ಎಂದು ಸಚಿವ ಸತೀಶ್ ಜಾರಕಿಹೊಳಿ ಮನವಿ ಮಾಡಿದರು.

ಕುಡಚಿ ವಿಧಾನಸಭಾ ಮತಕ್ಷೇತ್ರದ ಗುಂಡವಾಡ, ಶಿರಗೂರ, ಪರಮಾನಂದವಾಡಿ, ಖೇಮಲಾಪೂರ ಗ್ರಾಮಗಳಲ್ಲಿ ಆಯೋಜಿಸಿದ್ದ ಚಿಕ್ಕೋಡಿ ಲೋಕಸಭೆಯ ಚುನಾವಣಾ ಪ್ರಚಾರ ಸಭೆಯಲ್ಲಿ ಅವರು ಮಾತನಾಡಿ, ಕಾಂಗ್ರೆಸ್ ಪಕ್ಷ 2013ರಲ್ಲಿ ಅಧಿಕಾರಕ್ಕೆ ಬರುವುದಕ್ಕಿಂತ ಮುಂಚೆ ಪ್ರಣಾಳಿಕೆಯಲ್ಲಿ 165 ಭರವಸೆಗಳನ್ನು ನೀಡಿತು 158 ಭರವಸೆಗಳನ್ನು ಈಡೇರಿಸಿದೆ. ಅನ್ನಭಾಗ್ಯ, ಕ್ಷೀರಭಾಗ್ಯ, ಶೂ ಭಾಗ್ಯ, ರೈತರ ಸಾಲ ಮನ್ನಾ, ಇಂದಿರಾ ಕ್ಯಾಂಟೀನ್ ಹಾಗೂ ವಿದ್ಯಾಸಿರಿ ಯೋಜನೆಗಳನ್ನು ಈಡೇರಿಸಿದೆ ಎಂದರು.

ರಾಯಬಾಗ ಹಾಗೂ ಚಿಕ್ಕೋಡಿ ಭಾಗದಲ್ಲಿಕೂಡಾ ಸಾಕಷ್ಟು ಅಭಿವೃದ್ಧಿಗೆ ಕೆಲಸ ಮಾಡಲಾಗಿದೆ.

ಚಿಂಚಲಿ ಗ್ರಾಮದಲ್ಲಿ ನಮ್ಮ ಕಾರ್ಯಕರ್ತರು ಹಾಗೂ ಹಿಂದೆ ಪಕ್ಷೇತರವಾಗಿದ್ದ ಕಾರ್ಯಕರ್ತರು ಇಂದು ಒಂದಾಗಿದ್ದರಿಂದ ನಮ್ಮ ಪಕ್ಷಕ್ಕೆ ಆನೆ ಬಲ ಬಂದಂತಾಗಿದೆ.

ಈ ಬಾರಿ ಇದೊಂದು ಒಳ್ಳೆಯ ಅವಕಾಶವಿದ್ದು, ಕಾಂಗ್ರೆಸ್ ಪಕ್ಷಕ್ಕೆ ಹೆಚ್ಚು ಬೆಂಬಲ ನೀಡಲು ಮುಂದಾಗಬೇಕು. ಕಾಂಗ್ರೆಸ್ ಪಕ್ಷ ಅಧಿಕಾರಕ್ಕೆ ಬಂದ ಒಂಬತ್ತು ತಿಂಗಳ ಒಳಗೆ ಐದು ಗ್ಯಾರಂಟಿ ಯೋಜನೆಗಳನ್ನು ಈಡೇರಿಸಿದೆ. ಪ್ರತಿಯೊಂದು ಕುಟುಂಬಗಳಿಗೆ ನಾಲ್ಕರಿಂದ ಐದು ಸಾವಿರ ಹಣ ಉಳಿತಾಯವಾಗುತ್ತಿದೆ. ಗೃಹಲಕ್ಷ್ಮಿ

ಯೋಜನೆಯಿಂದ ಪ್ರತಿಯೊಂದು ಮನೆಯ ಗೃಹಿಣಿಯರು 2000 ಪಡೆದುಕೊಳ್ಳುತ್ತಿದ್ದಾರೆ.

ವಿದ್ಯುತ್ ಅನ್ನು ಉಚಿತವಾಗಿ ಪಡೆದುಕೊಳ್ಳುತ್ತಿದ್ದಾರೆ. ಶಕ್ತಿ ಯೋಜನೆಯಡಿ ಉಚಿತವಾಗಿ ಮಹಿಳೆಯರು ಪ್ರಯಾಣ ಮಾಡುತ್ತಿದ್ದಾರೆ. ಅನ್ನಭಾಗ್ಯದಲ್ಲಿ 5 ಕೆಜಿ ಅಕ್ಕಿ 5 ಕೆ.ಜಿ ಗೆ ಹಣವನ್ನು ಪಡೆಯುತ್ತಿದ್ದಾರೆ. ಆದ್ದರಿಂದ ಈ ಬಾರಿ ಪ್ರತಿಯೊಬ್ಬರು ಕಾಂಗ್ರೆಸ್ ಪಕ್ಷಕ್ಕೆ ಮತ ನೀಡಬೇಕು ಎಂದು ಮನವಿ ಮಾಡಿದರು.

ಕಾಂಗ್ರೆಸ್ ಗ್ಯಾರಂಟಿ ಜನರಿಗೆ ತಿಳಿಸಿ: ಕೇವಲ ಇನ್ನು 15 ದಿನಗಳು ಬಾಕಿ ಉಳದಿದ್ದು, ಕಾರ್ಯಕರ್ತರು ಮನೆ ಮನೆಗೆ ತೆರಳಿ ಕಾಂಗ್ರೆಸ್ ಜಾರಿಗೆ ತಂದ ಗ್ಯಾರಂಟಿ ಯೋಜನೆಗಳ ಕುರಿತು ಮಾಹಿತಿ ತಿಳಿಸಿ ಕೈ ಅಭ್ಯರ್ಥಿ ಪ್ರಿಯಂಕಾ ಅವರಿಗೆ ಹೆಚ್ಚು ಮತ ಹಾಕುವಂತೆ ತಿಳಿಹೇಳಬೇಕು.

ನಮ್ಮ ಪಕ್ಷದ ಗ್ಯಾರಂಟಿಗಳಿಂದ ಬಡ ಜನರು ಹಾಗೂ ಹೆಣ್ಣು ಮಕ್ಕಳ ಅರ್ಥಿಕ ಸ್ಥಿತಿ ಸುಧಾರಣೆ ಕಂಡಿದೆ. ದೇಶ ಕಟ್ಟುವಲ್ಲಿ ಕಾಂಗ್ರೆಸ್ ಪಕ್ಷ ಅಪಾರ ಕೊಡುಗೆ ನೀಡಿದೆ.

ಬ್ಯಾಂಕ್ ರಾಷ್ಟ್ರೀಕರಣ, ಗರೀಬಿ ಹಠಾವೋ, ನೀರಾವರಿ, ರಸ್ತೆಗಳು, ಶಾಲಾ ಕಾಲೇಜು, ವಿಶ್ವ ವಿದ್ಯಾಲಯಗಳು, ಇಸ್ರೊ ಸಂಸ್ಥೆ ಕಟ್ಟುವಂತಹ ಹಲವಾರು ಕೆಲಸಗಳನ್ನು ಮಾಡಿದೆ.

ಅಲ್ಲದೇ ಕಳೆದ ವಿಧಾನ ಸಭೆಯ ಚುನಾವಣೆಯಲ್ಲಿ ಕೊಟ್ಟ ಎಲ್ಲ ಗ್ಯಾರಂಟಿಗಳನ್ನು ಅನುಷ್ಠಾನಗೊಳಿಸಿ ನಮ್ಮ ಸರ್ಕಾರ ನುಡಿದಂತೆ ನಡೆದಿದೆ. ಹೀಗಾಗಿ ಈ ಭಾರಿ ಚಿಕ್ಕೋಡಿ ಸಮಗ್ರ ಅಭಿವೃದ್ಧಿಗೆ ಕೈ ಅಭ್ಯರ್ಥಿ ಪ್ರಿಯಂಕಾಗೆ ಬೆಂಬಲಿ ನೀಡಿ, ಕಾಂಗ್ರೆಸ್ ಪಕ್ಷ ಬಲಪಡಿಸಬೇಕು ಎಂದು ಮನವಿ ಮಾಡಿದರು.

ಕುಡಿಯುವ ನೀರಿಗೆ ಕ್ರಮ: ಚಿಂಚಲಿ ಗ್ರಾಮಕ್ಕೆ ಸುಮಾರು ವರ್ಷಗಳಿಂದ ನಮಗೆ ಸಂದಂಭವಿದೆ. ಜಾತ್ರೆ ಬಂದರೆ ಸಾಕು ಇಲ್ಲಿ ಲಕ್ಷಾಂತರ ಸಂಖ್ಯೆಯಲ್ಲಿ ಭಕ್ತರು ಈ ಗ್ರಾಮಕ್ಕೆ ಆಗಮಿಸುತ್ತಾರೆ. ಇಲ್ಲಿನ ಜನರಿಗೆ ಹಾಗೂ ಭಕ್ತರಿಗೆ ಕುಡಿಯುವ ನೀರಿನ ಸಮಸ್ಯೆಯಾಗದಂತೆ ಪ್ರತಿ ಭಾರಿ ನೀರು ಬೀಡಲಾಗುತ್ತಿದೆ.

ಈ ಭಾರಿ ಹೆಚ್ಚಿನ ಪ್ರಮಾಣದಲ್ಲಿ ಮೂರು ಹೊಳೆಗಳ ಮೂಲಕ ನೀರು ಬಿಡಲು ಹೆಚ್ಚಿನ ಪ್ರಯೋಗ ಮಾಡಲಾಗುತ್ತಿದೆ.

ಈ ಬಾರಿ ಇಲ್ಲಿನ ಜನರು ಇನ್ನು ಹೆಚ್ಚು ಅಭಿವೃದ್ಧಿ ಕಾರ್ಯಗಳನ್ನು ಮಾಡಲು ಕಾಂಗ್ರೆಸ್‌ಗೆ ಮತ ನೀಡಬೇಕು ಎಂದು ಹೇಳಿದರು.

ಇದಕ್ಕೂ ಮೊದಲು ವಿವಿಧ ಗ್ರಾಮಗಳಿಗೆ ಆಗಮಿಸಿದ ಸಚಿವ ಸತೀಶ್ ಜಾರಹೊಳಿ ಹಾಗೂ ಯುವ ನಾಯಕ ರಾಹುಲ್ ಜಾರಕಿಹೊಳಿ ಅವರಿಗೆ ಗ್ರಾಮದ ಮುಖಂಡರು ಸನ್ಮಾನಿಸಿದರು. ಅಲ್ಲದೇ ಕಾಂಗ್ರೆಸ್ ಪಕ್ಷದ ಸಾಧನೆ ಹಾಗೂ ಸಚಿವ ಸತೀಶ್ ಜಾರಕಿಹೊಳಿ ಅವರ ಅಭಿವೃದ್ಧಿ ಕಾರ್ಯ ನೋಡಿ ಬಿಜೆಪಿ-ಜೆಡಿಎಸ್ ಕಾರ್ಯಕರ್ತರು ಸಚಿವ ಸತೀಶ್ ಜಾರಕಿಹೊಳಿ ಸಮ್ಮುಖದಲ್ಲಿ ಕಾಂಗ್ರೆಸ್ ಪಕ್ಷಕ್ಕೆ ಸೇರ್ಪಡೆಯಾದರು.

ಈ ವೇಳೆ ಶಾಸಕ ಮಹೇಂದ್ರ ತಮ್ಮಣ್ಣವರ, ಮಾಜಿ ಶಾಸಕ ಶಾಮರಾವ್ ಗಾಟಗೆ, ಯುವ ಮುಖಂಡ ರಾಹುಲ್ ಜಾರಕಿಹೊಳಿ, ಡಾ. ಎನ್.ಎ. ಮಗದುಮ, ಡಾ. ಸಿ.ಬಿ. ಕುಲಗೋಡ, ಧರ್ಮಣ್ಣಾ ನಾಯಕ, ಅರ್ಜುನ ನಾಯಕವಾಡಿ, ದಸ್ತಗಿರಿ ಕಾಗವಾಡೆ, ಸಜೀವ ಭಾನೆ ಸರ್ಕಾರ, ಸುಕುಮಾರ ಪಾಟೀಲ, ಕುಮಾರ ಬ್ಯಾಡಗಿ ,ಗಿರಗೌಡ ಪಾಟೀಲ, ಗೌಸ ಅಬ್ದಲ ಮೂಲ್ಲಾ, ಶಿಥಲ ಬ್ಯಾಡಗಿ, ಅಣ್ಣಪ್ಪ ಉಗಾರೆ, ಬರತೇಶ ಬ್ಯಾಡಗಿ, ಸುಭಾಸ ಗಸ್ತಿ , ಭಾಶಾಲಾಲ ರೊಹಿಲ್ಲೆ, ಪ್ರಸಾದ ಶಿಂಗೆ , ಸೇರಿದಂತೆ ಹಲವಾರು ಕಾರ್ಯಕರ್ತರು ಉಪಸ್ಥಿತರಿದ್ದರು.

ಕಾಂಗ್ರೆಸ್ ಅಭ್ಯರ್ಥಿ ಚಂದ್ರು ಪರ ಸ್ಟಾರ್ ನಟ ದರ್ಶನ್ ಪ್ರಚಾರ

ಮಂಡ್ಯ: ಕಳೆದ ವಿಧಾನಸಭಾ ಚುನಾವಣೆಯಂತೆ ಈ ಬಾರಿಯ ಲೋಕಸಭಾ ಅಖಾಡದಲ್ಲೂ ಮಂಡ್ಯದಲ್ಲಿ ದಳಪತಿಗಳನ್ನು ಕಟ್ಟಿ ಹಾಕಬೇಕೆಂದು ಕಾಂಗ್ರೆಸ್ ನಾಯಕರು ಮಾಸ್ಟರ್ ಪ್ಲಾನ್ ಮಾಡುತ್ತಿದ್ದಾರೆ.

ಚಾಲೆಂಜಿಂಗ್ ಸ್ಟಾರ್ ದರ್ಶನ್ ಮಂಡ್ಯ ಲೋಕಸಭಾ ಚುನಾವಣೆಯ ಪ್ರಚಾರದ ಅಖಾಡಕ್ಕೆ ಇಳಿದಿದ್ದಾರೆ. ಕಳೆದ ಬಾರಿ ಲೋಕಸಭಾ ಚುನಾವಣೆಯಲ್ಲಿ ಸುಮಲತಾ ಅವರ ಬೆನ್ನಿಗೆ ನಿಂತಿದ್ದ ದರ್ಶನ್ ಈ ಬಾರಿ ಮಂಡ್ಯದಲ್ಲಿ ಕಾಂಗ್ರೆಸ್ ಅಭ್ಯರ್ಥಿ ವೆಂಕಟರಮಣೇಗೌಡ ಉರುಫ್ ಸ್ಟಾರ್ ಚಂದ್ರು ಪರ ಅಬ್ಬರದ ಪ್ರಚಾರ ಮಾಡುತ್ತಿದ್ದಾರೆ, ಅಂದು ಮಗನ ವಿರುದ್ಧ ಪ್ರಚಾರ ಮಾಡಿ ಸುಮಲತಾ ರನ್ನು ಗೆಲ್ಲಿಸಿಕೊಂಡಿದ್ದ ದರ್ಶನ್, ಇಂದು ಎಚ್ ಡಿ ಕುಮಾರಸ್ವಾಮಿ ವಿರುದ್ಧ ಪ್ರಚಾರಕ್ಕೆ ಇಳಿದಿದ್ದಾರೆ.

ಮಂಡ್ಯದಲ್ಲಿ ದರ್ಶನ್ ಬೆಂಬಲಿಸುವ ದೊಡ್ಡ ಒಕ್ಕಲಿಗರ ಪಡೆಯಿದ್ದು, ಏಳು

ವಿಧಾನಸಭಾ ಕ್ಷೇತ್ರಗಳಲ್ಲೂ ದರ್ಶನ್ ಫ್ಯಾನ್ಸ್ ಇದ್ದಾರೆ.

ಅಭಿಮಾನಿಗಳ ವೋಟ್ ಕಾಂಗ್ರೆಸ್‌ಗೆ ಬಂದರೆ ಶಕ್ತಿ ದುಪ್ಪಟ್ಟಾಗಲಿದೆ. ಸದ್ಯ ಹದಿನೈದು ದಿಗಳಿಂದ ಸ್ಟಾರ್ ಚಂದ್ರು ಕ್ಷೇತ್ರದಲ್ಲಿ ಬೀಡು ಬಿಟ್ಟು ನಿರಂತರ ಪ್ರಚಾರದಲ್ಲಿದ್ದಾರೆ.

ಹುಸ್ಕೂರು ಗ್ರಾಮಕ್ಕೆ ಆಗಮಿಸಿದ ನಟ ದರ್ಶನ್ ಅವರು ಕಾಂಗ್ರೆಸ್ ಅಭ್ಯರ್ಥಿ ಸ್ಟಾರ್ ಚಂದ್ರು ಪರ ರೋಡ್ ಶೋ ನಡೆಸಿದರು.

ನಟ ದರ್ಶನ್ ನೋಡಲು ಮಂಡ್ಯದಲ್ಲಿ ಜನರು ಮುಗಿಬಿದ್ದಿದ್ದು, ಅಭಿಮಾನಿಗಳು ಶಿಳ್ಳೆ, ಚಪ್ಪಾಳೆ ಹಾಕಿದ್ದಾರೆ.

ರೋಡ್ ಶೋ ಉದ್ದಕ್ಕೂ ಬಿಲ್ಡಿಂಗ್‌ಗಳ ಮೇಲೆ ಮಹಿಳೆಯರು ನಿಂತಿದ್ದ ದೃಶ್ಯ ಕಂಡು ಬಂದಿದೆ. ದರ್ಶನ್ ರೋಡ್ ಶೋಗೆ ಶಾಸಕ ನರೇಂದ್ರ ಸ್ವಾಮಿ, ಕದಲೂರು ಉದಯ್ ಸಾಥ್ ನೀಡಿದ್ದರು.

ಕಾಂಗ್ರೆಸ್ ಅಭ್ಯರ್ಥಿ ಸ್ಟಾರ್ ಚಂದ್ರು ಪರ ಪ್ರಚಾರ ನಡೆಸಿದ ನಟ ದರ್ಶನ್ ಅವರು ಅಭಿಮಾನಿಗಳನ್ನು ಉದ್ದೇಶಿಸಿ ಮಾತನಾಡಿದರು.

ನಾನು ಮೊದಲೇ ಹೇಳಿ ಬಿಡ್ತೀನಿ. ನಾನು ಯಾವುದೇ ಪಕ್ಷದ ಪರ ಪ್ರಚಾರಕ್ಕೆ ಬರಲ್ಲ, ಬರೋದು ಇಲ್ಲ. ನಾನು ಪ್ರಚಾರಕ್ಕೆ ಬರೋದು ಬರೀ ವ್ಯಕ್ತಿ ಪರ. ಇದೇ 5 ವರ್ಷದ ಕೆಳಗೆ ಶಾಸಕರಾದ ನರೇಂದ್ರಣ್ಣ ಅವರು ಮಾಡಿದಂತಹ ಸಹಾಯವನ್ನು ನೆನಪಿಸಿಕೊಳ್ಳುತ್ತೇವೆ. ಅವರ ಪ್ರೀತಿ, ಪ್ರೇಮ ಯಾವಾಗಲು ನೆನಪಿಸಿಕೊಳ್ಳುತ್ತೇವೆ. ಅವರ ಆಶೀರ್ವಾದವನ್ನು ಕೇಳಿ ಕೊಳ್ಳುತ್ತೇವೆ ಎಂದರು.

ಸುಮಮ್ಮ ಅವರಿಗೆ ಬಿಜೆಪಿ ಟಿಕೆಟ್ ಸಿಗಲಿಲ್ಲ ಅಂದ್ರೆ ನಮಗೆ ಸಹಾಯ ಮಾಡಬೇಕು ಅಂತ ನರೇಂದ್ರ ಸ್ವಾಮಿ ಮೊದಲೇ ಕೇಳಿದ್ದರು. ಫಸ್ಟ್ ಬಂದವರಿಗೆ ಫಸ್ಟ್ ಆದ್ಯತೆ ನೀಡಿದ್ದೇನೆ.

ಹೀಗಾಗಿ ಕಾಂಗ್ರೆಸ್ ಅಭ್ಯರ್ಥಿ ಸ್ಟಾರ್ ಚಂದ್ರು ಅವರಿಗೆ ಅಮೂಲ್ಯವಾದ ಮತ ಹಾಕಿ ಎಂದು ದರ್ಶನ್ ಪ್ರೀತಿಯಿಂದ ಕೇಳಿ ಕೊಂಡಿದ್ದಾರೆ.

ಇನ್ನೂ ಬಿಜೆಪಿ ಸೇರ್ಪಡೆ ಆದ ಬಳಿಕವೂ ಸುಮಲತಾ ಮೌನ ವಹಿಸಿದ್ದು, ಮಂಡ್ಯದಲ್ಲಿ ಬಹಿರಂಗ ಪ್ರಚಾರದಲ್ಲಿ ಕಾಣಿಸಿಕೊಂಡಿಲ್ಲ.

ಮಂಡ್ಯದಲ್ಲಿ ಮೈತ್ರಿ ಅಭ್ಯರ್ಥಿಯಾಗಿ ಎಚ್‌ಡಿಕೆ ಕಣದಲ್ಲಿದ್ದರೂ, ಮಂಡ್ಯ ಅಖಾಡದಲ್ಲಿ ಕಾಣಿಸಿಕೊಳ್ಳದ ಸುಮಲತಾ, ನನ್ನನ್ನು ಎಚ್‌ಡಿಕೆ ಅಹ್ವಾನಿಸಿಲ್ಲ ಎಂದಿದ್ದಾರೆ ಎಂದು ತಿಳಿದು ಬಂದಿದೆ.

ತಮಗೆ ಬಿಜೆಪಿಯಿಂದಲೇ ಅಧಿಕೃತ ಅಹ್ವಾನ ಬರಬೇಕು ಎಂಬುದು ಸುಮಲತಾ ಅಭಿಪ್ರಾಯವಾಗಿದೆ. ದರ್ಶನ್ ಆಗಮನ, ಸುಮಲತಾ ಮೌನದಿಂದ ಎಚ್‌ಡಿ ಕುಮಾರಸ್ವಾಮಿ ಅವರಿಗೆ ಡಬಲ್ ಟೆನ್ಷನ್ ಉಂಟಾಗಿದೆ. ಮಂಡ್ಯದಲ್ಲಿ ಗೆಲ್ಲಲೇಬೇಕಾದ ಅನಿವಾರ್ಯತೆ ಕುಮಾರಸ್ವಾಮಿಗಿದೆ.

ಇಂದು ರಾಮದುರ್ಗದಲ್ಲಿ ಕಾಂಗ್ರೆಸ್ ಭರ್ಜರಿ ಪ್ರಚಾರ

ರಾಮದುರ್ಗ : ಬೆಳಗಾವಿ ಲೋಕಸಭಾ ಚುನಾವಣೆ ಹಿನ್ನೆಲೆಯಲ್ಲಿ ಕಾಂಗ್ರೆಸ್ ಅಭ್ಯರ್ಥಿ ಮೃಣಾಲ ಹೆಬ್ಬಾಳಕರ್ ಪರ ಶುಕ್ರವಾರ ರಾಮದುರ್ಗ ತಾಲೂಕಿನಲ್ಲಿ ಭರ್ಜರಿ ಪ್ರಚಾರ ನಡೆಯಲಿದೆ.

ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಸಚಿವೆ ಲಕ್ಷ್ಮೀ ಹೆಬ್ಬಾಳಕರ್, ವಿಧಾನಸಭೆಯ ಮುಖ್ಯ ಸಚೇತಕ ಅಶೋಕ ಪಟ್ಟಣ, ಅಭ್ಯರ್ಥಿ ಮೃಣಾಲ ಹೆಬ್ಬಾಳಕರ್ ಸೇರಿದಂತೆ ಹಲವಾರು ನಾಯಕರು ಪ್ರಚಾರದಲ್ಲಿ ಭಾಗವಹಿಸಲಿದ್ದಾರೆ.

ಬೆಳಗ್ಗೆ 9.30ಕ್ಕೆ ಹಲಗತ್ತಿ, 10 ಗಂಟೆಗೆ ಲಿಂಗದಾಳ, 10.30ಕ್ಕೆ ಇಡಗಲ್, 11ಕ್ಕೆ ಚಿಕ್ಕಮೂಡಲಗಿ, 11.30ಕ್ಕೆ ಚಿಕ್ಕ ತಡಸಿ, ಮಧ್ಯಾಹ್ನ 12ಕ್ಕೆ ಹಂಪಿಹೊಳಿಯಲ್ಲಿ ಪ್ರಚಾರ ನಡೆಯಲಿದೆ.

12.30ಕ್ಕೆ ಸುರೇಬಾನ್ ಎಪಿಎಂಸಿ ಆವರಣದಲ್ಲಿ ಹಲಗತ್ತಿ ಹಾಗೂ ಸುರೇಬಾನ್ ಜಿಲ್ಲಾ ಪಂಚಾಯಿತಿ ಕ್ಷೇತ್ರಗಳ ಬಹಿರಂಗ ಸಭೆ ನಡೆಯಲಿದೆ.

ಸಂಜೆ 4 ಗಂಟೆಗೆ ರಾಮದುರ್ಗದ ರಾಯಣ್ಣ ವೃತ್ತದಿಂದ ಯುವಶಕ್ತಿ ಬೈಕ್ ರ್ಯಾಲಿ ನಡೆಯಲಿದೆ. ನಂತರ 5.30ಕ್ಕೆ ರಾಮದುರ್ಗ ಕಾರ್ ಸ್ಟ್ಯಾಂಡ್ ನಲ್ಲಿ ಬಹಿರಂಗ ಸಭೆ ನಡೆಯಲಿದೆ.

ಕಾರ್ಮಿಕರ ಸುಲಿಗೆ: ಮೂವರು ಯುವಕರ ಬಂಧನ

ದೊಡ್ಡಬಳ್ಳಾಪುರ: ರಾತ್ರಿ ವೇಳೆ ಕಾರ್ಮಿಕರನ್ನು ಬೆದರಿಸಿ ಹಣ ಮತ್ತು ಮೊಬೈಲ್ ಫೋನ್ ಸುಲಿಗೆ ಮಾಡುತ್ತಿದ್ದ ಮೂವರು ದರೋಡೆಕೋರರನ್ನು ಗ್ರಾಮಾಂತರ ಪೊಲೀಸರು ಬಂಧಿಸಿದ್ದಾರೆ.

ಕಲಬುರಗಿ ಆಕಾಶ್ (19), ಪ್ರವೀಣ (18), ಹನುಮಂತ (22) ಬಂಧಿತರು. ಇವರಿಂದ ರೂ 4.2 ಲಕ್ಷ ಮೌಲ್ಯದ 20 ಸ್ಮಾರ್ಟ್ ಫೋನ್ ವಶಕ್ಕೆ ಪಡೆಯಲಾಗಿದೆ.

ಏ.14ರ ರಾತ್ರಿ 11.30ಕ್ಕೆ ಆಲೂರು-ದುದ್ದನಹಳ್ಳಿಯ ಅಮರ್ ತಮ್ಮ ಸ್ನೇಹಿತ ಕೋಡಿಹಳ್ಳಿಯ ನಿವಾಸಿ ಕುಮಾರ್ ಅವರೊಂದಿಗೆ ದ್ವಿಚಕ್ರ ವಾಹನದಲ್ಲಿ ಸೊಣ್ಣಪ್ಪನಹಳ್ಳಿ ಗ್ರಾಮಕ್ಕೆ ತೆರಳತ್ತಿದ್ದರು. ಈ ವೇಳೆ ದಾರಿ ಮಧ್ಯ ಬೈಕ್ ತಡೆದ ಮೂವರು ಅಪರಿಚಿತರು ಮಾರಕಾಸ್ತ್ರ ತೋರಿಸಿ, ಇಬ್ಬರಿಂದ ಮೊಬೈಲ್ ಮತ್ತು ಹಣ ಕಸಿಯಲು ಯತ್ನಿಸಿದ್ದರು. ಈ ವೇಳೆ ಸಮೀಪದ ಗ್ರಾಮಸ್ಥರು ದುಷ್ಕರ್ಮಿಗಳನ್ನು ಹಿಡಿದು, ಪೊಲೀಸರ ವಶಕ್ಕೆ ಒಪ್ಪಿಸಿದ್ದಾರೆ.

ಕಲಬುರಗಿಯಿಂದ ಬೆಂಗಳೂರಿಗೆ ವಲಸೆ ಬಂದಿದ್ದ ಇವರು ಗಾರೆ ಕೆಲಸ ಮಾಡುತ್ತಿದ್ದರು. ಚಿಕ್ಕಜಾಲದಲ್ಲಿ ವಾಸವಿದ್ದ ಇವರಲ್ಲಿ ಒಬ್ಬಾತ ವಿದ್ಯಾರ್ಥಿ.

ಉತ್ತರ ಭಾರತದ ಕಾರ್ಮಿಕರನ್ನು ಗುರಿಯಾಗಿಸಿಕೊಂಡು ಇವರು, ಕಾರ್ಮಿಕರಿಗೆ ಸಂಬಳ ಆದ ದಿನ ರಾತ್ರಿ ಹೊತ್ತು ಹೊಂಚು ಹಾಕಿ ಮಾರಾಕಾಸ್ತ್ರ ತೋರಿಸಿ ಹೆದರಿಸುತ್ತಿದ್ದರು. ಅವರಿಂದ ಹಣ ಮತ್ತು ಮೊಬೈಲ್ ಸುಲಿಗೆ ಮಾಡುತ್ತಿದ್ದರು. ಸುಲಿಗೆ ಮಾಡಿದ ಹಣದಲ್ಲಿ ಮಾಡುತ್ತಿದ್ದರು ಎಂದು ಇನ್‌ಸ್ಪೆಕ್ಟರ್ ಸಾದಿಕ್ ಪಾಷಾ ತಿಳಿಸಿದ್ದಾರೆ.

ಕರಡಿ ದಾಳಿಗೆ ವೃದ್ಧ ಸಾವು

ಕೊಪ್ಪಳ: ದೇವಸ್ಥಾನ ಒಂದರಲ್ಲಿ ಏಕಾಏಕಿ ಕರಡಿ ಆಗಮಿಸಿದ್ದು ಈ ವೇಳೆ ವೃದ್ಧನ ಮೇಲೆ ಕರಡಿ ದಾಳಿ ನಡೆಸಿದೆ. ಆದರೆ ಗಾಯಾಳು ವೃದ್ಧನನ್ನು ಆಸ್ಪತ್ರೆಗೆ ದಾಖಲಿಸಿದರೂ ಚಿಕಿತ್ಸೆ ಫಲಿಸದೇ ವೃದ್ಧ ಸಾವನಪ್ಪಿರುವ ಘಟನೆ ಕೊಪ್ಪಳ ಜಿಲ್ಲೆಯ ಕನಕಗಿರಿ ತಾಲೂಕಿನ ರಾಂಪುರ್ ದಲ್ಲಿ ನಡೆದಿದೆ.

ಜಿಲ್ಲಾಸ್ಪತ್ರೆಯಲ್ಲಿ ಚಿಕಿತ್ಸೆ ಫಲಿಸದೆ ಚೆನ್ನಪ್ಪ ಮಡಿವಾಳರ್ (74) ಸಾವನ್ನಪ್ಪಿದ್ದಾರೆ.ಕೊಪ್ಪಳ ಜಿಲ್ಲೆಯ ಕನಕಗಿರಿ ತಾಲೂಕಿನ ರಾಂಪುರ್ ದಲ್ಲಿ ದಾಳಿ ನಡೆಸಿತ್ತು.

ಗ್ರಾಮದ ಆಂಜನೇಯ ದೇವಸ್ಥಾನಕ್ಕೆ ನುಗ್ಗಿದ್ದ ಕರಡಿಯನ್ನು ಸೆರೆ ಹಿಡಿದಿದ್ದರು. ದೇವಸ್ಥಾನದಲ್ಲಿ ದೀಪದ ಎಣ್ಣೆ ನೀರು ಕುಡಿಯಲು ಕರಡಿ ಬಂದಿತ್ತು ಎಂದು ಹೇಳಲಾಗುತ್ತಿತ್ತು. ಇದನ್ನು ಗಮನಿಸಿ ಜನರು ಬಾಗಿಲು ಮುಚ್ಚಿದ್ದರು. ದೇವಸ್ಥಾನದ ಎಲ್ಲಾ ಬಾಗಿಲು ಮುಚ್ಚಿ ಅರಣ್ಯ ಇಲಾಖೆಗೆ ಮಾಹಿತಿ ನೀಡಿದ್ದರು.

ಕರಡಿ ಸೆರೆ ಹಿಡಿಯಲು ಅರಣ್ಯ ಇಲಾಖೆ ಸಿಬ್ಬಂದಿ ಬೋನ್ ಇರಿಸಿದ್ದು ಕರಡಿ ಈ ವೇಳೆ ತಪ್ಪಿಸಿಕೊಂಡು ವೃದ್ಧ ಚೆನ್ನಪ್ಪ ಮಡಿವಾಳರ ಎನ್ನುವ ವೃದ್ಧನ ಮೇಲೆ ದಾಳಿ ಮಾಡಿತ್ತು. ಈ ವೇಳೆ ಗಾಯಾಳು ಚೆನ್ನಪ್ಪ ಮಡಿವಾಳರನ್ನು ಜಿಲ್ಲಾಸ್ಪತ್ರೆಗೆ ದಾಖಲಿಸಿದ್ದರು. ಆದರೆ ಚಿಕಿತ್ಸೆ ಸಲ್ಲಿಸದೆ ಜಿಲ್ಲಾ ಆಸ್ಪತ್ರೆಯಲ್ಲಿ ವಿರುದ್ಧ ಚೆನ್ನಪ್ಪ ಮಡಿವಾಳರ್ ಮೃತಪಟ್ಟಿದ್ದಾರೆ.ಅರಣ್ಯ ಇಲಾಖೆಯ ನಿರ್ಲಕ್ಷಕ್ಕೆ ವೃದ್ಧ ಬಲಿ ಎಂದು ಜನರು ಆಕ್ರೋಶ ವ್ಯಕ್ತಪಡಿಸುತ್ತಿದ್ದಾರೆ.

ಚಿರತೆ ದಾಳಿ, ಗಂಭೀರ ಗಾಯ

ಹೊಳೆನರಸೀಪುರ: ಜಮೀನಿನಲ್ಲಿ ಕೆಲಸ ಮಾಡುತ್ತಿದ್ದ ರೈತನ ಮೇಲೆ ಚಿರತೆ ದಾಳಿ ನಡೆಸಿದ್ದು, ರೈತ ಗಂಭೀರವಾಗಿ ಗಾಯಗೊಂಡಿರುವ ಘಟನೆ ತಾಲೂಕಿನ ಹೂವಿನಹಳ್ಳಿ ಗ್ರಾಮದಲ್ಲಿ ನಡೆದಿದೆ.

ಸಲ್ಮಾನ್ ಖಾನ್ (38) ಚಿರತೆ ದಾಳಿಯಿಂದ ಗಾಯಗೊಂಡ ದುರ್ದೈವಿ. ಜಮೀನಿನಲ್ಲಿ ಕೆಲಸ ಮಾಡುತ್ತಿದ್ದ ವೇಳೆ ಏಕಾಏಕಿ ಚಿರತೆ ದಾಳಿ ಮಾಡಿದ್ದು ರೈತ ಸಲ್ಮಾನ್‌ಖಾನ್ ಚಿರತೆಯೊಂದಿಗೆ ಹೋರಾಡಿ ಪ್ರಾಣ ಉಳಿಸಿಕೊಂಡಿದ್ದಾನೆ. ದಾಳಿಯಿಂದ ಗಂಭಿರ ಗಾಯಗೊಳಗಾದ ಸಲ್ಮಾನ್ ಖಾನ್ ನನ್ನು ಸ್ಥಳೀಯರ ತಾಲೂಕಿನ ಆಸ್ಪತ್ರೆಗೆ ದಾಖಲಿಸಿದ್ದು ಹೆಚ್ಚಿನ ಚಿಕಿತ್ಸೆಗೆ ಹಾಸನ ನಗರದ

ಮೇ.7 ರಂದು ಮತದಾನ: ಮತಗಟ್ಟೆ ಸುತ್ತಲೂ ಪ್ರತಿಬಂಧಕಾಜ್ಞೆ

ಬೆಳಗಾವಿ: ಬೆಳಗಾವಿ ಜಿಲ್ಲೆಯಲ್ಲಿ ಲೋಕಸಭಾ ಚುನಾವಣೆಯ ಮತದಾನವು ಮೇ. 7 ರಂದು ಜರುಗಲಿದ್ದು, ಜಿಲ್ಲೆ ಯ ಎಲ್ಲಾ ಮತಗಟ್ಟೆಗಳ ಸುತ್ತಮುತ್ತ 100 ಮೀಟರ್ ವ್ಯಾಪ್ತಿಯಲ್ಲಿ ಬೆಳಗ್ಗೆ 6 ರಿಂದ ಸಾಯಂಕಾಲ 7 ರವರೆಗೆ ಕಾನೂನು ಮತ್ತು ಸುವ್ಯವಸ್ಥೆ ಕಾಪಾಡುವ ಹಾಗೂ ಮತದಾನವು ಸುಗಮವಾಗಿ ಹಾಗೂ ಮುಕ್ತವಾಗಿ ಜರುಗಿಸುವ ನಿಟ್ಟಿನಲ್ಲಿ ಜಿಲ್ಲಾ ಚುನಾವಣಾಧಿಕಾರಿ ಹಾಗೂ ಜಿಲ್ಲಾಧಿಕಾರಿ ನಿತೇಶ್ ಪಾಟೀಲ್ ಅವರು ಪ್ರತಿಬಂಧಕಾಜ್ಞೆಯನ್ನು ವಿಧಿಸಿ ಆದೇಶ ಹೊರಡಿಸಿದ್ದಾರೆ.

ಬೆಳಗಾವಿ ಜಿಲ್ಲೆಯಾದ್ಯಂತ ಮತದಾನ ಜರುಗಲಿರುವ ಎಲ್ಲಾ ಮತಗಟ್ಟೆಗಳ ಸುತ್ತಮುತ್ತ 100 ಮೀಟರ್ ವ್ಯಾಪ್ತಿಯಲ್ಲಿ ಪ್ರತಿಬಂಧಕಾಜ್ಞೆ ಹೊರಡಿಸಲಾಗಿದ್ದು, ಒಂದು ವೇಳೆ ಆದೇಶವನ್ನು ಉಲಂಘಿಸಿದಲ್ಲಿ ಅಂತವರ ವಿರುದ್ಧ ಭಾರತೀಯ ದಂಡ ಸಂಹಿತೆಯ ಕಲಂ 188 ರ ಪ್ರಕಾರ ಕ್ರಮವನ್ನು ಜರುಗಿಸಲಾಗುವುದು.

ಈ ಆದೇಶವು ಮತದಾನ ಸಿಬ್ಬಂದಿ ಮತ್ತು ಅಧಿಕಾರಿಗಳಿಗೆ ಅಥ-ವಾ ಪೊಲೀಸ್ ಅಧಿಕಾರಿಗಳಿಗೆ ಹಾಗೂ ಚುನಾವಣಾ ಕಾರ್ಯ ನಿರತ ಸಿಬ್ಬಂದಿ ಮತ್ತು ಅಧಿಕಾರಿಗಳಿಗೆ ಹಾಗೂ ಒಬ್ಬೊಬ್ಬರಾಗಿ ಮತಗಟ್ಟೆಗಳಿಗೆ ತೆರಳಿ ಮತದಾನ ಮಾಡುವ ಮತದಾರರಿಗೆ ಅನ್ವಯಿಸುವುದಿಲ್ಲ ಎಂದು ಜಿಲ್ಲಾ ಚುನಾವಣಾಧಿಕಾರಿ ಹಾಗೂ ಜಿಲ್ಲಾಧಿಕಾರಿ ಹೇಳಿದ್ದಾರೆ.

ಮೇ.07 ರಂದು ಜಿಲ್ಲೆಯಾದ್ಯಂತ ಪ್ರತಿಬಂಧಕಾಜ್ಞೆ

ಬೆಳಗಾವಿ: ಬೆಳಗಾವಿ ಜಿಲ್ಲೆಯಲ್ಲಿ ಲೋಕಸಭಾ ಚುನಾವಣೆಯ ಮತದಾನವು ಮೇ. 7 ರಂದು ಜರುಗಲಿದ್ದು, ಜಿಲ್ಲೆಯಾದ್ಯಂತ ಮೇ.5 ಸಂಜೆ 6 ಗಂಟೆಯಿಂದ ಮೇ.8 ರ ಬೆಳಗ್ಗೆ 11 ಗಂಟೆಯವರೆಗೆ ಸಿ.ಆರ್.ಪಿ.ಸಿ 1973 ರ ಕಲಂ 144 ಮತ್ತು ಕರ್ನಾಟಕ ಪೊಲೀಸ್ ಕಾಯ್ದೆ 1963 ರ ಕಲಂ 35 ರಡಿ ಜಿಲ್ಲಾ ಚುನಾವಣಾಧಿಕಾರಿ ಹಾಗೂ ಜಿಲ್ಲಾಧಿಕಾರಿಗಳಾದ ನಿತೇಶ್ ಪಾಟೀಲ ಅವರು ಪ್ರತಿಬಂಧಕಾಜ್ಞೆಯನ್ನು ವಿಧಿಸಿ ಆದೇಶ ಹೊರಡಿಸಿದ್ದಾರೆ.

ಬೆಳಗಾವಿ ಜಿಲ್ಲೆಯಲ್ಲಿ ಮೇ.7 ರಂದು ಮತದಾನ ಜರುಗಲಿರುವ ಪ್ರಯುಕ್ತ ಬೆಳಗಾವಿ ಜಿಲ್ಲೆಯಾದ್ಯಂತ (01 ಚಿಕ್ಕೋಡಿ ಲೋಕಸಭಾ ಮತಕ್ಷೇತ್ರದ, 02 ಬೆಳಗಾವಿ ಲೋಕಸಭಾ ಮತಕ್ಷೇತ್ರದ ಹಾಗೂ 12-ಉತ್ತರ ಕನ್ನಡ ಲೋಕಸಭಾ ಮತಕ್ಷೇತ್ರದ ಚನ್ನಮ್ಮನ ಕಿತ್ತೂರು ಮತ್ತು ಖಾನಾಪೂರ ತಾಲೂಕಿನ ವ್ಯಾಪ್ತಿಯಲ್ಲಿ) 05 ಕ್ಕಿಂತ ಹೆಚ್ಚು ಜನರು ಗುಂಪು ಸೇರುವುದು, ಮೆರವಣಿಗೆ ಅಥವಾ ಸಭೆ ಸಮಾರಂಭ ಜರುಗಿಸುವುದನ್ನು ನಿಷೇಧಿಸಿದೆ.

ಚುನಾವಣಾ ಅಭ್ಯರ್ಥಿಗಳು/ ಬೆಂಬಲಿಗರು ಮನೆ ಮನೆಗೆ ತೆರಳಿ ಮತಯಾಚನೆ ಮಾಡಬಹುದಾಗಿದ್ದು ಅದರಲ್ಲಿ 05 ಜನರಿಗಿಂತ ಹೆಚ್ಚಿನ ಸಂಖ್ಯೆಯ ಜನರು ಸೇರತಕ್ಕದ್ದಲ್ಲ.

ಮತದಾರರಲ್ಲದವರು ಚುನಾವಣಾ ಮತಕ್ಷೇತ್ರಗಳ ವ್ಯಾಪ್ತಿಯಿಂದ ಹೊರಗೆ ಹೋಗತಕ್ಕದ್ದು, ಶಸ್ತ್ರ, ಬಡಿಗೆ, ಬರ್ಚಿ, ಖಡ್ಗ, ಬಂದೂಕು, ಚೂರಿ, ಲಾಠಿ, ಡೊಣ್ಣೆ, ಚಾಕು ಅಥವಾ ದೇಹಕ್ಕೆ ಅಪಾಯವನ್ನು ಉಂಟು ಮಾಡಬಹುದಾದ ಯಾವುದೇ ಮಾರಕಾಸ್ತ್ರವನ್ನು ತೆಗೆದುಕೊಂಡು ಹೋಗುವುದನ್ನು ಮತ್ತು ತಿರುಗಾಡುವುದನ್ನು ಪ್ರತಿಬಂಧಿಸಲಾಗಿದೆ.

ಕಲ್ಲುಗಳನ್ನು, ಕ್ಷಾರಪಧಾರ್ಥ ಇಲ್ಲವೆ ಸ್ಫೋಟಕ ವಸ್ತುಗಳು ಯಾವುದೇ ದಾಹಕ ವಸ್ತುಗಳು ಇತ್ಯಾದಿಗಳನ್ನು ಸದರಿ ಸ್ಥಳಕ್ಕೆ ತೆಗೆದುಕೊಂಡು ಹೋಗುವುದನ್ನು ಹಾಗೂ ಶೇಖರಿಸುವುದನ್ನು ನಿಷೇಧಿಸಲಾಗಿದೆ.ಕಲ್ಲುಗಳನ್ನು ಮತ್ತು ಎಸೆಯುವಂಥಹ ವಸ್ತುಗಳನ್ನು ಎಸೆಯುವ ಅಥವಾ ಬಿಡುವ ಸಾಧನಗಳನ್ನು ತೆಗೆದುಕೊಂಡು ಹೋಗುವುದನ್ನು ನಿಷೇಧಿಸಲಾಗಿದೆ. ಮನುಷ್ಯ ಶವಗಳ ಅಥವಾ ಅವುಗಳ ಆಕೃತಿ ಅಥವಾ ಪ್ರತಿಮೆಗಳನ್ನು ಪ್ರದರ್ಶನ ಮಾಡುವುದನ್ನು ಪ್ರತಿಬಂಧಿಸಲಾಗಿದೆ. ಸದರಿ ಸ್ಥಳದಲ್ಲಿ ಬಹಿರಂಗವಾಗಿ ಘೋಷಣೆ ಮಾಡುವುದು, ಪದ ಹಾಡುವುದು, ವಾದ್ಯ ಬಾರಿಸುವುದು, ವ್ಯಾಖ್ಯಾನ ಕೊಡುವುದು, ಸನ್ನೆ ಅಥವಾ ನಕಲಿ ಪ್ರದರ್ಶನವನ್ನು ಹಾಗೂ ಸಾರ್ವಜನಿಕ ಸಭ್ಯತೆ ಅಥವಾ ನೀತಿಯನ್ನು ಆಕ್ರಮಿಸಬಹುದಾದ ಕೃತ್ಯಗಳನ್ನು ಮಾಡುವುದನ್ನು ನಿಷೇಧಿಸಲಾಗಿದೆ.

ಸಾರ್ವಜನಿಕವಾಗಿ ಯಾವುದೇ ವ್ಯಕ್ತಿ ಪ್ರಚೋದನಾತ್ಮಕ ಹಾಗೂ ಉದ್ರೇಕಕಾರಿ ಹಾಡುಗಳು, ಕೂಗಾಟ ಮಾಡುವುದನ್ನು ಹಾಗೂ ವ್ಯಕ್ತಿಗಳ ತೇಜೋವಧೆ ಮಾಡುವಂತಹ ಚಿತ್ರಗಳು, ಚಿಹ್ನೆಗಳು, ಪ್ರತಿಕೃತಿಗಳು ಮುಂತಾದವುಗಳನ್ನು ಪ್ರದರ್ಶಿಸುವುದಾಗಲಿ ಹಾಗೂ ಸಾರ್ವಜನಿಕರ ಗಾಂಭೀರ್ಯ ಹಾಗೂ ನೈತಿಕತೆಗೆ ಭಂಗ ತರುವಂತಹ ಅಥವಾ ಕಾನೂನು ಮತ್ತು ಸುವ್ಯವಸ್ಥೆಗೆ ಭಂಗ ತರುವಂತಹ ಯಾವುದೇ ಕೃತ್ಯಗಳಲ್ಲಿ ತೊಡಗುವುದನ್ನು ನಿಷೇಧಿಸಲಾಗಿದೆ.

ವಿವರಿಸಿದ ಮಾರಕಾಸ್ತ್ರಗಳು, ಸ್ಫೋಟಕ ವಸ್ತುಗಳು, ವಿನಾಶಕಾರಿ ವಸ್ತುಗಳು ಹಾಗೂ ಇತರ ಆಕ್ಷೇಪಾರ್ಹ ವಸ್ತುಗಳನ್ನು ಹೊಂದಿದ್ದು ಕಂಡುಬಂದ ಕೂಡಲೇ ಅವುಗಳನ್ನು ವಶಪಡಿಸಿಕೊಳ್ಳಲು ಯಾವುದೇ ಪೊಲೀಸ್ ಅಧಿಕಾರಿಗಳಿಗೆ ಅಧಿಕಾರ ಇರುತ್ತದೆ. ಅಂಥಹ ಮಾರಕಾಸ್ತ್ರಗಳನ್ನು ಸರಕಾರಕ್ಕೆ ಮುಟ್ಟುಗೋಲು ಮಾಡಿಕೊಳ್ಳಲಾಗುವುದು. ಅಲ್ಲದೇ ಸಂಬಂಧಿಸಿದ ವ್ಯಕ್ತಿಗಳ ಮೇಲೆ ಕಾನೂನು ರೀತ್ಯ ಕ್ರಮ ಜರುಗಿಸಲಾಗುವುದು.

ಶವ ಸಂಸ್ಕಾರಕ್ಕೆ ಅಥವಾ ಮದುವೆ ಮತ್ತು ಧಾರ್ಮಿಕ ಮೆರವಣಿಗೆಗಳಿಗೆ ಈ ಆಜ್ಞೆ ಅನ್ವಯಿಸುವುದಿಲ್ಲ. ಮದುವೆ ಮತ್ತು ಇತರೆ ಧಾರ್ಮಿಕ ಮೆರವಣಿಗೆಗಳು ಯಾವತ್ತೂ ಚುನಾವಣಾ ನೀತಿ ಸಂಹಿತೆ ಉಲ್ಲಂಘನೆಯಾಗದಂತೆ ಹಾಗೂ ಕಾನೂನು ಮತ್ತು ಸುವ್ಯವಸ್ಥೆಗೆ ಧಕ್ಕೆ ತರದಂತೆ ನಿಯಮಗಳನ್ನು ಪಾಲಿಸುವುದು.

ಸದರಿ ಆದೇಶವನ್ನು ಉಲಂಘಿಸುವವರ ವಿರುದ್ಧ ಭಾರತೀಯ ದಂಡ ಸಂಹಿತೆಯ ಕಲಂ 188 ರ ಪ್ರಕಾರ ಕ್ರಮವನ್ನು ಜರುಗಿಸಲಾಗುವುದು. ಈ ಆದೇಶವು ಮತದಾನ ಸಿಬ್ಬಂದಿ ಮತ್ತು ಅಧಿಕಾರಿಗಳಿಗೆ ಅಥವಾ ಪೊಲೀಸ್ ಅಧಿಕಾರಿಗಳಿಗೆ ಹಾಗೂ ಚುನಾವಣಾ ಕಾರ್ಯ ನಿರತ ಸಿಬ್ಬಂದಿ ಮತ್ತು ಅಧಿಕಾರಿಗಳಿಗೆ ಹಾಗೂ ಒಬ್ಬೊಬ್ಬರಾಗಿ ಮತಗಟ್ಟೆಗಳಿಗೆ ತೆರಳಿ ಮತದಾನ ಮಾಡುವ ಮತದಾರರಿಗೆ ಅನ್ವಯಿಸುವುದಿಲ್ಲ ಎಂದು ಜಿಲ್ಲಾ ಚುನಾವಣಾಧಿಕಾರಿ ಹಾಗೂ ಜಿಲ್ಲಾಧಿಕಾರಿ ನಿತೇಶ ಪಾಟೀಲ ಅವರು ಆದೇಶದಲ್ಲಿ ತಿಳಿಸಿದ್ದಾರೆ.

ವ್ಯಕ್ತಿ ಕಾಣೆ

ಬೆಳಗಾವಿ: ಬೆಳಗಾವಿ ಜಿಲ್ಲೆಯ ರಾಯಬಾಗ ತಾಲೂಕಿನ ಹಿಡಕಲ್ ಗ್ರಾಮದ ಭೂಪಾಲ ಚಿದಾನಂದ ಗಲಗಲಿ ಎಂಬಾತ ಏ.1 ರಂದು ಮನೆಯಿಂದ ಯಾರಿಗೂ ಹೇಳದೆ ಎಲ್ಲಯೋ ಹೋಗಿ ಕಾಣೆಯಾಗಿದ್ದಾನೆ ಎಂದು ಕಾಣೆಯಾದ ವ್ಯಕ್ತಿಯ ಪತ್ನಿ ಲಕ್ಷ್ಮೀ ಬೂಪಾಲ ಗಲಗಲಿ ಅವರು ಹಾರೂಗೇರಿ ಠಾಣೆಯಲ್ಲಿ ದೂರು ದಾಖಲಿಸಿದ್ದಾರೆ.

ಕಾನೆಯಾದ ವ್ಯಕ್ತಿ ಚಹರೆ: ವಯಸ್ಸು 28, 5 ಫೂಟ್ 4ಇಂಚ್ ಎತ್ತರ, ಸದೃಢ ಮೈಕಟ್ಟು, ಗೋದಿಕೇಂಪು ಮೈಬಣ್ಣ, ಕೋಲು ಮೂಖ, ತೀಳಿ ನೀಲಿ ಬಣ್ಣದ ಟಿ-ಶರ್ಟ್ ಹಾಗೂ ನೀಲಿ ಬಣ್ಣದ ಜೀನ್ಸ್ ಪ್ಯಾಮಟ್ ಧರಿಸಿರುತ್ತಾನೆ. ಸದರಿ ಕಾಣೆಯಾದ ವ್ಯಕ್ತಿ ಬಗ್ಗೆ ಮಾಹಿತಿ ಸಿಕ್ಕಲ್ಲಿ ದೂರವಾಣಿ: 8431984124 ಸಂಖ್ಯೆಗೆ ಸಂಪರ್ಕಿಸಬಹುದು ಎಂದು ಹಾರೂಗೇರಿ ಪೊಲೀಸ್ ಠಾಣೆಯ ಠಾಣಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಕಡ್ಡಾಯ ಮತದಾನ ಜಾಗೃತಿ ಅಭಿಯಾನ: ವಿಕಲಚೇತನರಿಂದ ಯಂತ್ರಚಾಲಿತ ದ್ವಿಚಕ್ರ ವಾಹನ ಜಾಥಾ

ಚುನಾವಣೆ ಪರ್ವ ದೇಶದ ಗರ್ವ: ಎಲ್ಲರೂ ಕಡ್ಡಾಯವಾಗಿ ಮತದಾನ ಹಕ್ಕು ಚಲಾಯಿಸಿ:ಜಿಲ್ಲಾಧಿಕಾರಿ ನಿತೇಶ್ ಪಾಟೀಲ

ಬೆಳಗಾವಿ: ಜಿಲ್ಲೆಯಲ್ಲಿ 56 ಸಾವಿರ ವಿಶೇಷಚೇತನ ಅಂಗವಿಕಲ ಮತದಾರರು ಇದ್ದಾರೆ. ರಾಜ್ಯದಲ್ಲಿ ಅತಿ ಹೆಚ್ಚು ವಿಕಲಚೇತನ ಮತದಾರರ ನೋಂದಣಿಯನ್ನು ಮಾಡಿಕೊಳ್ಳಲಾಗಿದೆ. ಮೇ 7 ರಂದು ನಡೆಯಲಿರುವ ಲೋಕಸಭಾ ಚುನಾವಣೆಯಲ್ಲಿ ಎಲ್ಲಾ ವಿಶೇಷಚೇತನ ಅಂಗವಿಕಲರು ಮತಗಟ್ಟೆಯಲ್ಲಿ ಕಡ್ಡಾಯವಾಗಿ ಮತದಾನ ಮಾಡಬೇಕು ಎಂದು ಜಿಲ್ಲಾಧಿಕಾರಿ ನಿತೇಶ ಪಾಟೀಲ ಅವರು ಹೇಳಿದರು.

ಭಾರತ ಚುನಾವಣಾ ಆಯೋಗ, ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ತಾಲೂಕ ಪಂಚಾಯತ್, ಜಿಲ್ಲಾ ಸ್ವೀಪ್ ಸಮಿತಿ, ಮಹಾನಗರ ಪಾಲಿಕೆ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ವಿಕಲಚೇತನರ ಹಾಗೂ ಹಿರಿಯ ನಾಗರಿಕರ ಸಬಲೀಕರಣ ಇಲಾಖೆಯ ಸಂಯುಕ್ತಾಶ್ರಯದಲ್ಲಿ ನಗರದ ಜಿಲ್ಲಾಧಿಕಾರಿಗಳ ಕಚೇರಿಯ ಆವರಣದಲ್ಲಿ ಗುರುವಾರ (ಏ.18) ನಡೆದ "ಕಡ್ಡಾಯ ಮತದಾನ ಜಾಗೃತಿ ಜಾಥಾ" ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು.

ಲೋಕಸಭಾ ಚುನಾವಣೆ ಹಿನ್ನಲೆಯಲ್ಲಿ ವಿಶೇಷ ಚೇತನರ ಮತದಾನ ಜಾಗೃತಿ ಅಭಿಯಾನ ಹಮ್ಮಿಕೊಳ್ಳಲಾಗಿದೆ. ವಿಶೇಷ ಚೇತನ ಅಂಗವಿಕಲರು ಹಾಗೂ 85 ವರ್ಷ ಮೇಲ್ಪಟ್ಟವರು ಮನೆಯಲ್ಲಿ ಮತದಾನ ಮಾಡಲು ಏ.25, 26 ರಂದು ಅವರ ಮನೆಗೆ ತೆರಳಿ ಪೋಸ್ಟೆಲ್ ಬ್ಯಾಲೆಟ್ ಮುಖಾಂತರ ಮತ ತೆಗೆದುಕೋಳ್ಳಲಾಗುವುದು ಎಂದು ಹೇಳಿದರು.

18 ಮತಕ್ಷೇತ್ರಗಳಲ್ಲಿ ಮತಗಟ್ಟೆ ಎಲ್ಲಾ ವಿಶೇಷಚೇತನ ಅಂಗವಿಕಲರಿಗೆ ಮತದಾನ ಮಾಡಲು ಮತಗಟ್ಟೆ ಸ್ಥಾಪಸಿ ಮತದಾನಕ್ಕೆ ಅವಕಾಶ ಕಲ್ಪಿಸಲಾಗಿದೆ ಎಲ್ಲಾ ವಿಕಲಚೇತನರು ಕಡ್ಡಾಯವಾಗಿ ಮತ ಚಲಾಯಿಸಬೇಕು ಎಂದು ಹೇಳಿದರು.

ಬಳಿಕ ಜಿಲ್ಲಾಧಿಕಾರಿ ಹಾಗೂ ಚುನಾವಣಾಧಿಕಾರಿ ನಿತೇಶ್ ಪಾಟೀಲ ಅವರು ಸಾರ್ವತ್ರಿಕ ಲೋಕಸಭಾ ಚುನಾವಣೆಯ ಪ್ರಯುಕ್ತ ಆಯೋಜಿಲಾದ "ಕಡ್ಡಾಯ ಮತದಾನ ಜಾಗೃತಿ ಅಭಿಯಾನಕ್ಕೆ ವಿಕಲಚೇತನ-ರಿಂದ ಯಂತ್ರಚಾಲಿತ ದ್ವಿ-ಚಕ್ರ ವಾಹನ ಜಾಥಾಗೆ ಹಸಿರು ನಿಶಾನೆ ತೊರಿಸುವುದರ ಮುಲಕ ಚಾಲನೆ ನೀಡಿದರು.

"ಚುನಾವಣೆ ಪರ್ವ ದೇಶದ ಗರ್ವ" "ನನ್ನ ಮತ ನನ್ನ ಹಕ್ಕು" ನಿಮ್ಮ ಮತ ನಿಮ್ಮ ಭವಿಷ್ಯ, "ಮತ ಚಲಾವಣೆ ನಿಮ್ಮ ಹಕ್ಕು ತಪ್ಪದೆ ನಿಮ್ಮ ಮತ ಚಲಾಯಿಸಿ" ಎಂಬ ಘೋಷ ವಾಕ್ಯಗಳ ಮತದಾನ ಜಾಗೃತಿ ಫಲಕಗಳನ್ನು ವಿಕಲಚೇತನ-ರಿಂದ ಪ್ರದರ್ಶಿಸಲಾಯಿತು.

ಜಿಲ್ಲಾಧಿಕಾರಿಗಳ ಕಚೇರಿಯ ಆವರಣದಿಂದ ಪ್ರಾರಂಭವಾದ ಜಾಗೃತಿ ಜಾಥಾ ನಗರದ ಚನ್ನಮ್ಮ ವೃತ್ತದ ಮಾರ್ಗವಾಗಿ ಧರ್ಮವೀರ ಸಂಭಾಜಿ ವೃತ್ತದ ವರೆಗೆ ತಲುಪಿ ಸಮಾರೋಪಗೊಂಡಿತು.

ಈ ಸಂದರ್ಭದಲ್ಲಿ ಜಿಲ್ಲಾ ಸ್ವೀಪ್ ಸಮಿತಿ ರಾಯಭಾರಿ ರಾಘವೇಂದ್ರ ಅಣ್ವೇಕರ, ಮಹಾನಗರ ಪಾಲಿಕೆ ಆಯುಕ್ತರಾದ ಲೊಕೇಶ, ಜಿಲ್ಲಾ ಪಂಚಾಯತ್ ಯೋಜನಾ ನಿರ್ದೇಶಕರಾದ ಡಾ. ಕೃಷ್ಣರಾಜು, ಮುಖ್ಯ ಯೋಜನಾ ನಿರ್ದೇಶಕ ಗಂಗಾಧರ್ ದಿವಿಟರ, ಲೆಕ್ಕಾಧಿಕಾರಿಗಳಾದ ಜಿ. ಹಿರೇಮಠ, ವಾರ್ತಾಧಿಕಾರಿಗಳಾದ ಗುರುನಾಥ ಕಡಬೂರು, ಜಿಲ್ಲಾ ಅಂಗವಿಕಲರ ಕಲ್ಯಾಣಾಧಿಕಾರಿ ನಾಮದೇವ ಬಿಲ್ಕರ ಮತ್ತು ಬೆಳಗಾವಿ, ಬೈಲಹೊಂಗಲ, ಕಿತ್ತೂರು, ಖಾನಾಪೂರ, ಸವದತ್ತಿ, ರಾಮದುರ್ಗ ಮತ್ತು ಗೋಕಾಕ ತಾಲೂಕಿನ ವಿವಿಧೋದ್ದೇಶ ಪುನರ್ವಸತಿ ಕಾರ್ಯಕರ್ತರು ಅಥವಾ ಗ್ರಾಮೀಣ ಮತ್ತು ನಗರ ಪುನರ್ವಸತಿ ಕಾರ್ಯಕರ್ತರು ಹಾಗೂ ನೂರಾರು ವಿಕಲಚೇತನರು ಜಾಗೃತಿ ಜಾಥಾ ಕಾರ್ಯಕ್ರಮದಲ್ಲಿ ಪಾಲ್ಗೊಂಡಿದ್ದರು.

ಚಂದನ ಹೊಸುರ ಶ್ರೀ ಕಲ್ಮೇಶ್ವರ ಜಾತ್ರಾ ಮಹೋತ್ಸವ

ಬೆಳಗಾವಿ: ಬೆಳಗಾವಿ ತಾಲೂಕಿನ ಚಂದನಹೊಸುರ ಗ್ರಾಮದ ಶ್ರೀ ಕಲ್ಮೇಶ್ವರಜಾತ್ರಾ ಮಹೋತ್ಸವ ಐದು ದಿನಗಳ ರವಿವಾರ ದಿ 21ರಿಂದ 25ರ ವರೆಗೆ ಸಂಭ್ರಮದಿಂದ ಜಾತ್ರಾಕಾರ್ಯಕ್ರಮಗಳು ಜರುಗುವುವು. ರವಿವಾರ ದಿ. 21ರಂದು ಅಂಬಲಿ ಗಾಡಿಗಳನ್ನು ಸಿದ್ಧ ಪಡಿಸಿ ಕಿಚ್ಚದಕಟ್ಟಿಗೆಯನ್ನು ತಂದು ಕಿಚ್ಚದಕಟ್ಟಗೆಗೆ ಪೂಜೆ ಮಾಡಿ ಜಾತ್ರೆ ಪ್ರಾಂಭವಾಗುವುದು. ಹಾಗೂ ರಾತ್ರಿ 9-30 ಗಂಟೆಯಿಂದ ಭಜನಾಕಾರ್ಯ ಕ್ರಮಜರುಗುವುದು.

ಸೋಮವಾರ ದಿ.22ರಂದು ಕಲ್ಮೇಶ್ವರ ದೇವಸ್ಥಾನದ ಸುತ್ತ ಅಂಬಲಿ ಬಂಡೆಗಳು ದೇವರ ಪ್ರದಕ್ಷಣೆ ಹಾಕುವುದು ನಂತರ ಅಂಬಲಿ ಹಾಗೂ ಗುಗ್ಗರಿ ಮಹಾಪ್ರಸಾದ ಜರುಗುವುದು ನಂತರರಾತ್ರಿ 9.30 ಕ್ಕೆ ಡೊಳ್ಳಿನ ಪದಕಾರ್ಯ ಕ್ರಮಜರುಗುವುದು.

ಮಂಗಳವಾರ 23ರಂದು ಚಕ್ಕಡಿ ಟ್ರಾಕ್ಟರ್, ಟ್ಯಾಂಪೋ ಇನ್ನಿತರ ವಾಹನಗಳಿಂದ ಕಟ್ಟಿಗೆಯನ್ನು ತಂದು ಕಿಚ್ಚವನ್ನು ತಯಾರಿಸಿ ಸಂಜೆ 6 ಗಂಟೆಗೆ ಕಿಚ್ಚ ಹಾಯುವುದು ನಂತರ 9-30 ಕ್ಕೆ ಶ್ರೀಕೃಷ್ಣ ಪಾರಿಜಾತ ನಾಟಕ ಜರುಗುವುದು.

ಬುಧವಾರ 24ರಂದು ಕಲ್ಮೇಶ್ವರದೇವರಿಗೆ ಕಾಯಿ ಒಡೆಯುವುದು. ನಂತರ ಬೇಡಿಕೊಂಡ ಭಕ್ತಾಧಿಗಳು ತಮ್ಮ ಹರಕೆಯನ್ನು ತೀರಿಸುವುದು ಹಾಗೂ ರಾತ್ರಿ 9-30 ಕ್ಕೆ ಸಂಗ್ಯಾಬಾಳ್ಯಾ ಬಯಲಾಟಜರಗುವುದು.

ಗುರುವಾರ 25 ರಂದು ಶ್ರೀ ಅಡಿವೆಪ್ಪ ಅಜ್ಜನವರ ಗದ್ದುಗೆಗೆ ಹಾಗೂ ಶಿವಬಸ್ಸಪ್ಪ ಅಜ್ಜನವರಗದ್ದುಗೆಗೆ ಅಭಿಷೇಕ ನಂತರಕಲ್ಮೇಶ್ವರ ಪಾಲಕಿ ಉತ್ಸವದೊಂದಿಗೆ ಜಾತ್ರೆಯು ಮುಕ್ತಾಯವಾಗುವುದೆಂದು ಶ್ರೀ ಕಲ್ಮೇಶ್ವರ ದೇವಸ್ಥಾನ ಪಂಚ ಕಮಿಟಿಯವರು ಪ್ರಕಟನೆಯಲ್ಲಿ ತಿಳಿಸಿದ್ದಾರೆ.

ತಂತ್ರಜ್ಞಾನದ ಸದ್ವಿನಿಯೋಗದಿಂದ ಸಮಾಜದ ಪ್ರಗತಿ

ಬೆಳಗಾವಿ: ತಂತ್ರಜ್ಞಾನವು ಮಾನವ ನಿರ್ಮಿತವಾಗಿದ್ದರೂ ಕೂಡಾ, ಅವು ಪ್ರಸಕ್ತ ದಿನಗಳಲ್ಲಿ ಮಾನವನಿಗೆ ಆರ್ಥಿಕ, ಔದ್ಯೋಗಿಕ ಮತ್ತು ಮಾನಸಿಕವಾಗಿ ಹಾನಿ ಉಂಟು ಮಾಡುತ್ತಿವೆ. ಆದರೆ ತಂತ್ರಜ್ಞಾನವನ್ನು ಸಂಪೂರ್ಣವಾಗಿ ಅರಿತುಕೊಂಡು ಸದ್ಬಳಕೆ ಮಾಡಿಕೊಂಡಾಗ, ಸಮಾಜ ಪ್ರಗತಿ ಹೊಂದುವುದು ಎಂದು ಬೆಳಗಾವಿಯ ಸ್ಮಾರ್ಟ್ ಸಿಟಿ ಅಧಿಕಾರಿ ಶ್ರೀನಿವಾಸ ಹೇಳಿದರು.

ನಗರದ ರಾಣಿ ಚನ್ನಮ್ಮ ವಿಶ್ವವಿದ್ಯಾಲಯದ ಕುವೆಂಪು ಸಭಾಭವನದಲ್ಲಿ ಗ್ರಂಥಾಲಯ ಮತ್ತು ಮಾಹಿತಿ ವಿಜ್ಞಾನ ವಿಭಾಗದ ನೇತೃತ್ವದಲ್ಲಿ 'ನವ ಜ್ಞಾನ ಉತ್ಪತ್ತಿ ಮತ್ತು ಕೃತಕ ಬುದ್ಧಿಮತ್ತೆ' ವಿಷಯದ ಕುರಿತಾಗಿ ಗುರುವಾರ ಜರುಗಿದ ವಿಶೇಷ ಉಪನ್ಯಾಸ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು.

ಕೃತಕ ಬುದ್ಧಿಮತ್ತೆ (ಆರ್ಟಿಫಿಷಿಯಲ್ ಇಂಟ-ಲಿಜೆನ್ಸ್) ಮುಂಬರುವ ದಿನಗಳಲ್ಲಿ ಬಹಳಷ್ಟು ಉದ್ಯೋಗಗಳನ್ನು ಕಸಿದುಕೊಳ್ಳುವುದು ಎಂಬ ಸಂಗತಿ ಎಲ್ಲೆಡೆ ಪ್ರಚಲಿತದಲ್ಲಿದೆ. ಆದರೆ ಇದರಂತೆ 4 ಶತಮಾನಗಳ ಹಿಂದೆ ಕೈಗಾ-ರಿಕೆ ಕ್ರಾಂತಿಯಿಂದ ಇತ್ತೀಚಿನ ಎರಡು ದಶಕಗಳ ಹಿಂದಿನ ಕಂಪ್ಯೂಟರ್ ಬಳಕೆವರೆಗೆ ಅನೇಕ ಹೊಸ ಹೊಸ ಆವಿಷ್ಕಾರಗಳು ಉದ್ಯೋಗ ಕಸಿದುಕೊಳ್ಳುತ್ತವೆ ಎಂಬ ಆತಂಕ ಸೃಷ್ಟಿಸಿದ್ದವು ಎಂಬುದು ಇತಿಹಾಸ. ಅದೇ ರೀತಿ ಕೃತಕ ಬುದ್ಧಿಮತ್ತೆ ಕೂಡಾ ಪ್ರಸಕ್ತ ದಿನಗಳಲ್ಲಿ ಉದ್ಯೋಗ ಕಸಿಯುವ ರಾಕ್ಷಸನಂತೆ ಬಿಂಬಿತ ಗೊಂಡಿರುವುದು ಸಾಮಾನ್ಯವಾಗಿದೆ ಎಂದರು.

ಕೃತಕ ಬುದ್ಧಿಮತ್ತೆ ಮಾತ್ರವಲ್ಲದೆ ಎಲ್ಲ ತಂತ್ರಜ್ಞಾನಗಳು ಮಾನವ ಜೀವನವನ್ನು ಸುಲಭಗೊಳಿಸುವ ಸಾಧನಗಳಾಗಿವೆ. ಅವುಗಳ ಜ್ಞಾನವನ್ನು ಸಂಪೂರ್ಣವಾಗಿ ಅರಿತುಕೊಂಡು, ನಮ್ಮ ದಿನನಿತ್ಯದ ಕಾರ್ಯ ಮತ್ತು ವೃತ್ತಿಪರತೆಯನ್ನು ವೃದ್ಧಿಸಿಕೊಳ್ಳಲು ಕೂಡಾ ಬಳಸಬಹುದು.

ಇಲ್ಲಿಯವರೆಗೆ ಪ್ರಪಂಚದಲ್ಲಿ ಅಂದಾಜು 15 ಕೋಟಿ ಪುಸ್ತಕಗಳಿವೆ. ಆದರೆ ಇನ್ನು ಮುಂದೆ ಕೃತಕ ಬುದ್ಧಿಮತ್ತೆ ಸಹಾಯದಿಂದ ಪುಸ್ತಕ ಬರೆಯುವುದು ತುಂಬಾ ಸುಲಭ. ಹಾಗಾಗೀ ಮುಂಬರುವ 3 ದಶಕಗಳಲ್ಲಿ ಪುಸ